# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –288 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:11–06–2025 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 288 | RNI No: KARKAN/2023/88462 | KA/SK/CTA-874/2024-2026 | Chitradurga | Date: 11-06-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು
ವಿವಿ ಸಾಗರ ಕೆಆರ್‌ಎಸ್ ಮಾದರಿಯಲ್ಲಿ ಪ್ರವಾಸಿತಾಣವನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ 2
ಸಿದ್ದರಾಮಯ್ಯ ಆಧುನಿಕ ಜೀತಪದ್ಧತಿ ಮುಕ್ತ ನೀತಿ ಹರಿಕಾರ: ಹೆಚ್.ಆಂಜನೇಯ 3
ಕನ್ನಡದ ಕೆಲಸ ಹಾಗಬೇಕೆ ಹೊರತು ರಾಜಕೀಯ ಪ್ರೇರಿತ ಕೆಲಸ ಅಲ್ಲ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಜೂನ್ 12ರಂದು ಅಡಿಕೆ ಸಿಪ್ಪೆಯಿಂದ ಕಾಂಪೋಷ್ಟ್ ತಯಾರಿಕಾ ಕುರಿತು ತರಬೇತಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ತುಮಕೂರಿನ ಮಲ್ಟಿಪ್ಲೆಕ್ಸ್ ಬಯೋಟೆಕ್ ಪ್ರೈ ಲಿಮಿಟೆಡ್ ಸಹಭಾಗಿತ್ವದಲ್ಲಿ ಇದೇ ಜೂನ್ 12ರಂದು ಬೆಳಿಗ್ಗೆ 10ಕ್ಕೆ ಜಿಲ್ಲೆಯ ರೈತರಿಗೆ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಜೈವಿಕ ಗೊಬ್ಬರ ಮತ್ತು ಜೈವಿಕ ಪೀಡೆನಾಶಕಗಳ ಬಳಕೆ ಹಾಗೂ ಅಡಿಕೆ ಸಿಪ್ಪೆಯಿಂದ ಕಾಂಪೋಷ್ಟ್ ತಯಾರಿಕಾ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ತುಮಕೂರಿನ ಮಲ್ಟಿಪ್ಲೆಕ್ಸ್ ಬಯೋಟೆಕ್ ಪ್ರೈ ಲಿ, ತಾಂತ್ರಿಕ ಮುಖ್ಯಸ್ಥ ಎಸ್.ಕುಮಾರ್ ಅವರು ಸಾವಯವ ಕೃಷಿಯ ಅಗತ್ಯತೆ ಮತ್ತು ಅನುಕೂಲಗಳು ಹಾಗೂ ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಜೈವಿಕ ಗೊಬ್ಬರ ಮತ್ತು ಜೈವಿಕ ಪೀಡೆನಾಶಕಗಳ ಬಳಕೆ ಬಗ್ಗೆ ವಿಷಯ ಮಂಡನೆ ಮಾಡುವರು. ಭರಮಸಾಗರದ ಪ್ರಗತಿಪರ ರೈತರಾದ ಲೋಕೇಶ್ ಅವರು ಅಡಿಕೆ ಸಿಪ್ಪೆಯಿಂದ ಕಾಂಪೋಷ್ಟ್ ತಯಾರಿಕೆಯ ತಮ್ಮ ಅನುಭವ ಹಂಚಿಕೊಳ್ಳುವರು ಹಾಗೂ ಕಾಂಪೋಷ್ಟ್ ಮಾಡುವ ಅಣು ಜೀವಿ ಗೊಬ್ಬರವನ್ನು ಬಳಸಿ ಪ್ರಾತ್ಯಕ್ಷಿಕೆಯ ಮೂಲಕ ಅಡಿಕೆ ಸಿಪ್ಪೆಯಿಂದ ಕಾಂಪೋಷ್ಟ್ ತಯಾರಿಕೆಯ ವಿಧಾನವನ್ನು ತೋರಿಸಲಾಗುವುದು. ಆದ ಪ್ರಯುಕ್ತ ಆಸಕ್ತ 70 ಜನ ರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು 8277931058 ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ತಿಳಿಸಿದ್ದಾರೆ.

ಮೊದಲು ನೋಂದಾವಣಿ ಮಾಡಿಕೊಂಡ 70 ರೈತಭಾಂದವರು ಫ್ರೂಟ್ಸ್‌ಐಡಿ (ಎಫ್.ಐಡಿ) ಅಥವಾ ಚುನಾವಣೆ ಗುರುತಿನ ಚೀಟಿ ಅಥವಾ ಆಧಾರ್ ಕಾರ್ಡನೊಂದಿಗೆ ತರಬೇತಿಗೆ ಹಾಜರಾಗಲು ವಿನಂತಿಸಿದೆ. ನೋಂದಾಯಿಸಿಕೊಂಡು ತರಬೇತಿಗೆ ಹಾಜರಾಗುವ ಆಸಕ್ತ ರೈತರಿಗೆ ತರಬೇತಿಯ ಕೊನೆಯಲ್ಲಿ ಕಾಂಪೋಷ್ಟ್ ಮಾಡುವ ಅಣು ಜೀವಿ ಗೊಬ್ಬರವನ್ನು ವಿತರಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

### ಮನೆ ಮೇಲ್ಛಾವಣಿಯಿಂದ ಬಿದ್ದ ವ್ಯಕ್ತಿ ಸಾವು: ಇಬ್ಬರ ವಿರುದ್ಧ ಪ್ರಕರಣ

» **ಚಳ್ಳಕೆರೆ**

ತಾಲ್ಲೂಕಿನ ದೇವರಮರಿಕುಂಟೆ ಗ್ರಾಮದಲ್ಲಿ ಮನೆ ಮೇಲ್ಛಾವಣಿ ರಿಪೇರಿ ಸಂದರ್ಭದಲ್ಲಿ ಸಿಮೆಂಟ್‌ಸೀಟ್ ಮುರಿದು ಬಿದ್ದು ದುರುಗೇಶಪ್ಪ(61) ಎಂಬ ವ್ಯಕ್ತಿಗೆ ಕೆಳಗೆ ಬಿದ್ದು ಪೆಟ್ಟಾಗಿದ್ದು ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿದ ನಂತರ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾನೆ. ಮೃತ ಪುತ್ರ ಡಿ.ನಿರಂಜನಮೂರ್ತಿ ಮನೆ ಕೆಲಸ ಸಂದರ್ಭದಲ್ಲಿ ಸುರಕ್ಷತೆ ವಹಿಸದ ಹಿನ್ನೆಲೆಯಲ್ಲಿ ಅದೇ ಗ್ರಾಮದ ಮಹಂತೇಶಪ್ಪ, ವಿರೂಪಾಕ್ಷಪ್ಪ ಎಂಬುವವರ ಮೇಲೆ ದೂರು ನೀಡಿದ್ದು, ಎಎಸ್‌ಐ ಎಂ.ರೇಣುಕಪ್ಪ ಪ್ರಕರಣ ದಾಖಲಿಸಿದ್ದಾರೆ.

### ಗುರುತಿನ ಚೀಟಿ ವಿತರಣೆ

» **ದಾವಣಗೆರೆ**

2024–25 ನೇ ಸಾಲಿನ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ವತಿಯಿಂದ ವಲಸೆ ಕುರಿಗಾರರಿಗೆ ಗುರುತಿನ ಚೀಟಿ ವಿತರಿಸಲು ಅರ್ಹ ವಲಸೆ ಕುರಿಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯಲ್ಲಿ 20 ಕ್ಕೂ ಹೆಚ್ಚು ಕುರಿ ಮೇಕೆಗಳನ್ನು ಹೊಂದಿರುವ ಸಂಚಾರಿ ಕುರಿಗಾಹಿಗಳು ತಮ್ಮ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳಿಂದ ಅರ್ಜಿಗಳನ್ನು ಪಡೆದು, ವಲಸೆ ಕುರಿಗಾರರು ಎಂಬುದಕ್ಕೆ ಸ್ಥಳೀಯ ಪಶು ವೈದ್ಯಾಧಿಕಾರಿಗಳಿಂದ ಪ್ರಮಾಣ ಪತ್ರ ಲಗತ್ತಿಸಿ ಸೂಕ್ತ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು ತಮ್ಮ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿಗಳಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸ್ಥಳೀಯ ಪಶು ಚಿಕಿತ್ಸಾಲಯ, ಪಶು ಆಸ್ಪತ್ರೆಯ ಪಶುವೈದ್ಯಾಧಿಕಾರಿ, ಆಯಾ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ ಅಥವಾ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕರು, ದಾವಣಗೆರೆ ಇವರನ್ನು ಸಂಪರ್ಕಿಸಿ.

## ಶಾಸಕ ರಘುಮೂರ್ತಿ 62ನೇ ಹುಟ್ಟುಹಬ್ಬದ ಸಂಭ್ರಮ

# ಹೆಚ್ಚಿನ ಅವಕಾಶ ದೊರಕಿದರೆ ಮತ್ತಷ್ಟು ಜಿಲ್ಲೆ ಅಭಿವೃದ್ಧಿಗೆ ಶ್ರಮ: ಟಿ.ರಘುಮೂರ್ತಿ

» **ಚಿತ್ರದುರ್ಗ**

ಸರ್ವ ಜನಾಂಗದ ಸಹಕಾರದಿಂದ ನನ್ನ ಕ್ಷೇತ್ರ ಅಭಿವೃದ್ಧಿ ಮಾಡಿದ್ದು ಮುಂದಿನ ದಿನದಲ್ಲಿ ಹೆಚ್ಚಿನ ಅವಕಾಶ ದೊರಕಿದರೆ ಮತ್ತಷ್ಟು ಜಿಲ್ಲೆಯ ಅಭಿವೃದ್ಧಿ ಮಾಡುತ್ತೇನೆ ಎಂದು ಶಾಸಕ ಟಿ.ರಘುಮೂರ್ತಿ ಹೇಳಿದರು.

ನಗರದ ಪ್ರವಾಸಿ ನಾಯಕ ಸಮಾಜದಿಂದ ಏರ್ಪಡಿಸಿದ್ದು ಹುಟ್ಟು ಹಬ್ಬ ಸಂಭ್ರಮಾಚರಣೆಯಲ್ಲಿ ಭಾಗವಹಿಸಿ ಕೇಕ್ ಕಟ್ ಮಾಡಿ ಮಾತನಾಡಿದರು.

ನಾಯಕ ಸಮಾಜದಿಂದ ಹುಟ್ಟು ಹಬ್ಬ ಆಚರಣೆ ನನಗೆ ಸಾಕಷ್ಟು ಖುಷಿ ತಂದಿದೆ. ಜಿಲ್ಲಾ ಕೇಂದ್ರದಲ್ಲಿ ಇದೇ ಮೊದಲ ಬಾರಿಗೆ ಹುಟ್ಟು ಹಬ್ಬ ಆಚರಣೆ ಮಾಡಿಕೊಂಡಿದ್ದು ನಮ್ಮ ಸಮಾಜದ ಬಂಧುಗಳು ಮತ್ತು ಇತರೆ ಸಮಾಜದ ಬಂಧುಗಳು, ಅಧಿಕಾರಿ ವರ್ಗ ಆಗಮಿಸಿ ಅತ್ಯಂತ ಪ್ರೀತಿಯಿಂದ ಅಭಿನಂದನೆ ಸಲ್ಲಿಸಿದ್ದು ಅವರಿಗೆ ನಾನು ಚಿರ ಋಣಿಯಾಗಿರುತ್ತೇನೆ.

ಮುಂದಿನ ದಿನದಲ್ಲಿ ಪಕ್ಷ ಹೆಚ್ಚಿನ ಕೆಲಸ ಮಾಡಲು ಅವಕಾಶ ಕಲ್ಪಿಸಿದರೆ ಜಿಲ್ಲೆಯ ಅಭಿವೃದ್ಧಿ ನಾನು ಸಹ ನನ್ನ ಶಕ್ತಿ ಮೀರಿ ಪ್ರಯತ್ನಿಸುತ್ತೇನೆ. ಪಕ್ಷ ನೀಡಿದ ಎಲ್ಲಾ ಜವಬ್ದಾರಿಗಳನ್ನು ಸಮರ್ಥವಾಗಿ ನಿರ್ವಹಿಸಿದ್ದೇನೆ. ಮೂರು ಬಾರಿ ಗೆಲುವು ಸಾಧಿಸುವ ಜೊತೆಗೆ ಲೋಕಸಭೆ ಚುನಾವಣೆಯಲ್ಲಿ ಲೀಡ್, ನಗರಸಭೆ ಅಧಿಕಾರ, ಗ್ರಾಮ ಪಂಚಾಯತಿ ಮಟ್ಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಪಕ್ಷದ ಆಡಳಿತ ನಡೆಸಲು ಎಲ್ಲಾ ರೀತಿಯಿಂದಲೂ ಶಕ್ತಿ ನೀಡಿದ್ದು ಕಾಂಗ್ರೆಸ್ ಪಕ್ಷಕ್ಕೆ ನಿಷ್ಠಾವಂತ ಕಾರ್ಯಕರ್ತನಂತೆ ದುಡಿಯುತ್ತಿದ್ದೇನ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಾಯಕ ಸಮಾಜದ ಮುಖಂಡರಾದ ಎಟಿಎಸ್ ತಿಪ್ಪೇಸ್ವಾಮಿ, ಮಂಜುನಾಥ್, ಅಹೋಬಲ ಟಿವಿಎಸ್ ಅರುಣ್ ಕುಮಾರ್, ಕಾಟೀಹಳ್ಳಿ ಕರಿಯಪ್ಪ, ಸವಿತಾ ರಘು, ನಾಗರಾಜ್ ಜಾನ್ವಾವಿ, ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ದಿನೇಶ್ ಗೌಡಗೆರೆ, ಅಶೋಕ್ ಬೆಳಘಟ್ಟ, ಪ್ರಶಾಂತ್ ಮತ್ತು ಅಧಿಕಾರಿಗಳು, ರೈತ ಸಂಘ ಮುಖಂಡರು, ಸಂಘಟನೆಗಳ ಅಧ್ಯಕ್ಷರು ಆಗಮಿಸಿ ಶುಭ ಕೋರಿದರು.



## ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಶಾಸಕ ಹುಟ್ಟುಹಬ್ಬ ಆಚರಣೆ

» **ಚಿತ್ರದುರ್ಗ**

ಚಳ್ಳಕೆರೆ ಕ್ಷೇತ್ರದ ವಿಧಾನಸಭೆಯ ಸದಸ್ಯರು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕಾ ಅಭೀವೃದ್ದಿ ನಿಗಮದ ಅಧ್ಯಕ್ಷರಾದ ಟಿ.ರಘುಮೂರ್ತಿಯವರ ಹುಟ್ಟು ಹಬ್ಬವನ್ನು ಇಂದು ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಎಸ್.ಟಿ.ಘಟಕದ ಮುಂಚೂಣಿಯಲ್ಲಿ ವಿವಿಧ ಘಟಕಗಳ ಸಂಯುಕ್ತಾಶ್ರಯದಲ್ಲಿ ಆಚರಣೆ ಮಾಡಲಾಯಿತು.



ರಘುಮೂರ್ತಿಯವರು ಕಾಂಗ್ರೆಸ್ ಕಚೇರಿ ಬಳಿ ಬರುತ್ತಿದ್ದಯೇ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು ಅವರಿಗೆ ಹೂ ಮಾಲೆ, ಶಾಲು, ಬೊಕ್ಕೆ ನೀಡಿ, ಪೇಟವನ್ನು ಹಾಕುವುದರ ಮೂಲಕ ಶುಭಾಷಯವನ್ನು ಕೋರಿದರು. ಇದೆ ಸಂದರ್ಭದಲ್ಲಿ ಪಟಾಕಿಯನ್ನು ಹಚ್ಚುವುದರ ಮೂಲಕ ಸಂತಸವನ್ನು ಹಂಚಲಾಯಿತು. ಅವರು ಅಗಮಿಸಿದಾಗ ಅವರ ಮೇಲೆ ಹೂ ಮಳೆಯನ್ನು ಸುರಿಸಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಿಮ್ಮ ಪ್ರೀತಿಗೆ ನಾನು ಅಭಾರಿಯಾಗಿದ್ದೇನೆ, ನಿಮ್ಮ ಪ್ರೀತಿಯನ್ನು ನನಗೆ ಧಾರೆ ಎರೆದಿದ್ದೀರಾ, ನಾನು ಕಾಂಗ್ರೆಸ್ ಪಕ್ಷದ ಕಟ್ಟಾಳಾಗಿದ್ದೇನೆ, ಪಕ್ಷದ ಒಬ್ಬ ಕಾರ್ಯಕರ್ತನಾಗಿ, ನಿಮ್ಮ ಜೊತೆಯಲ್ಲಿ ಇರುತೇನೆ, ಪಕ್ಷ ಇದ್ದರೆ ಅಧಿಕಾರ, ಪಕ್ಷಕ್ಕಾಗಿ ಜನ ಪ್ರತಿನಿಧಿಗಳಾಗಿ ಜನ ಸಾಮಾನ್ಯರಿಗಾಗಿ ದುಡಿಯೋಣ, ನನಗೆ ಪಕ್ಷ ಎಲ್ಲವನ್ನು ನೀಡಿದೆ ಅದಕ್ಕೆ ನಾನು ಮುಖಂಡರಿಗೆ ಅಬಾರಿಯಾಗಿದ್ದೇನೆ, ನಾನು ಇಲ್ಲಿಗೆ ತಡವಾಗಿ ಬಂದರೂ ಸಹಾ ನೀವುಗಳೆಲ್ಲಾ ಕಾದಿದ್ದು ನನಗೆ ಶುಭವನ್ನು ಕೋರಿದ್ದೀರಾ, ಇದಕ್ಕೆ ನಾನು ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದರು.ಈ ಸಂದರ್ಬದಲ್ಲಿ ಡಿಸಿಸಿ ಅಧ್ಯಕ್ಷರಾದ ತಾಜ್‌ಪೀರ್, ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ಮೈಲಾರಪ್ಪ, ನಗರಾಭೀವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಆರ್.ಕೆ.ಸರ್ದಾರ್, ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷರಾದ ಶಿವಣ್ಣ, ತಾಲ್ಲೂಕು ಅಧ್ಯಕ್ಷರಾದ ಪ್ರಕಾಶ್, ಎಸ್.ಟಿ.ಘಟಕದ ಅಧ್ಯಕ್ಷರಾಧ ಮಂಜುನಾಥ್, ಎಸ್.ಸಿ.ಘಟಕದ ಅಧ್ಯಕ್ಷರಾದ ಜಯ್ಯಣ್ಣ, ಓಬಿಸಿ ಘಟಕದ ಅಧ್ಯಕ್ಷರಾದ ಎನ್.ಡಿ.ಕುಮಾರ್, ಶಿಕ್ಷಕರ ಘಟಕದ ಅಧ್ಯಕ್ಷರಾದ ಮುದಾಸಿರ್, ಖುದ್ದುಸ್, ಪ್ರಕಾಶ್ ರಾಮ್ ನಾಯ್ಕ್, ಮಹಿಳಾ ಘಟಕದ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿಗೌಡ, ಕುಮಾರಗೌಡ, ಲಕ್ಷ್ಮೀಕಾಂತ್. ತಿಪ್ಪೇಸ್ವಾಮಿ, ರವಿಕುಮಾರ್, ನಿಶಾನಿ, ವೆಂಕಟೇಶ್, ಜಿ.ಪಂ.ಮಾಜಿ ಸದಸ್ಯರಾದ ಬಾಬುರೆಡ್ಡಿ, ಜಿ.ಪಂ.ಮಾಜಿ ಅಧ್ಯಕ್ಷರಾದ ರವಿಕುಮಾರ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

### ದೇವಸ್ಥಾನಕ್ಕೆ ತೆರಳಿ ಪೂಜೆ : ಅನಾಥಾಶ್ರಮದಲ್ಲಿ ಹಣ್ಣು ವಿತರಣೆ

# ರಘುಮೂರ್ತಿಗೆ ಸಚಿವ ಸ್ಥಾನ ಸಿಗಲಿ: ಕಾರ್ಯಕರ್ತರ ಅಭಿಲಾಷೆ...

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಹ್ಯಾಟ್ರಿಕ್ ದಿಗ್ವಿಜಯ ಖ್ಯಾತಿಹೊಂದಿರುವ ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ, ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಮ್ಮ 62ನೇ ಹುಟ್ಟುಹಬ್ಬವನ್ನು ಶಾಸಕರ ಭವನದ ಆವರಣದಲ್ಲಿ ಸಾವಿರಾರು ಅಭಿಮಾನಿಗಳ ಸಮ್ಮುಖದಲ್ಲಿ ಪತ್ನಿ ಗಾಯಿತ್ರಮ್ಮರೊಂದಿಗೆ ಸಂಭ್ರಮ, ಸಡಗರಗಳಿಂದ ಆಚರಿಸಿಕೊಂಡರು.

ಶಾಸಕ ಟಿ.ರಘುಮೂರ್ತಿ ಕಳೆದ ಸುಮಾರು 12 ವರ್ಷಗಳಿಂದ ಈ ಕ್ಷೇತ್ರದ ಶಾಸಕನಾಗಿ ಸಾವಿರಾರು ಕೋಟಿಯ ನೂರಾರು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿರುತ್ತಾರೆ. ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ತಮ್ಮದೇಯಾದ ರೀತಿಯಲ್ಲಿ ಚಿಂತನೆ ನಡೆಸಿ ಯೋಜನೆಗಳನ್ನು ರೂಪಿಸಿದ್ದಾರೆ. ವಿಶೇಷವಾಗಿ ಕಾಂಗ್ರೆಸ್ ಪಕ್ಷವನ್ನು ಈ ಕ್ಷೇತ್ರದಲ್ಲಿ ಬೇರುಮಟ್ಟದಿಂದ ಗಟ್ಟಿಗೊಳಿಸಿದ್ದಾರೆ. ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಮುಖಂಡರಿಗೆ ಸಮಯೋಚಿತ ಮಾರ್ಗದರ್ಶನ ನೀಡುತ್ತಾ ಪ್ರತಿಯೊಂದು ಚುನಾವಣೆಯಲ್ಲೂ ಕಾಂಗ್ರೆಸ್ ಪಕ್ಷ ಈ



ಕ್ಷೇತ್ರದಲ್ಲಿ ಜಯಬೇರಿಬಾರಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಾಬಂದಿದ್ದಾರೆ. ಇವರ ಅವಧಿಯಲ್ಲಿ ನಡೆದ ಗ್ರಾಮ ಪಂಚಾಯಿತಿ, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿ, ಸಹಕಾರ ಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಸ್ಪರ್ಧಿಸಿ ಗೆಲುವನ್ನು ಕಂಡಿರುವುದು ಶಾಸಕ ಟಿ.ರಘುಮೂರ್ತಿಯವರ ಪರಿಶ್ರಮದಿಂದ ಎಂದು ಹೇಳಬಹುದಾಗಿದೆ.

ಈ ಬಾರಿ ಅಭಿಮಾನಿಗಳು ವಿಶೇಷವಾಗಿ ಶಾಸಕ ಟಿ.ರಘುಮೂರ್ತಿ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಿ ನಗರದ ಎಲ್ಲಾ ಪ್ರಮುಖ ರಸ್ತೆಗಳಲ್ಲಿ ಶುಭಾಶಯ ಕೋರುವ ಬ್ಯಾನರ್‌ಗಳನ್ನು ಬಾರಿಪ್ರಮಾಣದಲ್ಲಿ ಕಟ್ಟಿರುತ್ತಾರೆ. ಚಳ್ಳಕೆರೆಗೆ ಆಗಮಿಸಿದ ಶಾಸಕ ಚಳ್ಳಕೆರೆಯಮ್ಮ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ನಂತರ ಶ್ರೀವೀರಭದ್ರಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿದರು. ಅಲ್ಲಿಂದ ನೇರವಾಗಿ ಬೆಂಗಳೂರು ರಸ್ತೆಯಲ್ಲಿರುವ ಬನಶ್ರೀ ವೃದ್ಧಾಶ್ರಮಕ್ಕೆಭೇಟಿ ನೀಡಿದರು. ನಗರಸಭಾ ಕಚೇರಿಗೆ ಆಗಮಿಸಿ ಅಲ್ಲಿ ವಿವಿಧ ಇಲಾಖೆ ಅಧಿಕಾರಿಗಳಿಂದ ಹುಟ್ಟುಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡು ಶಾಸಕಭವನಕ್ಕೆಆಗಮಿಸಿಅಲ್ಲಿನಿರ್ಮಿಸಿರುವ ವೇದಿಕೆಯಲ್ಲಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಕ್ಷೇತ್ರದಾದ್ಯಂತ ಆಗಮಿಸಿದ್ದ ಪಕ್ಷದ ಮುಖಂಡರು, ಅಭಿಮಾನಿಗಳು ರಘುಮೂರ್ತಿ ದಂಪತಿಗಳಿಗೆ ಶಾಲುಹೊದಿಸಿ ಸನ್ಮಾನಿಸಿ, ಗೌರವಿಸಿದರು. ಇದೇ ಸಂದರ್ಭದಲ್ಲಿ ಅಭಿಮಾನಿಗಳು ಮೂರುಬಾರಿ ಶಾಸಕರಾಗಿ ಎರಡು ಬಾರಿ ನಿಗಮಮಂಡಳಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಟಿ.ರಘುಮೂರ್ತಿಗೆ ಸಚಿವ ಸ್ಥಾನ ನೀಡಬೇಕೆಂಬ ಕೂಗು ಕೇಳಿಬಂತು. ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಶಾಸಕ ಟಿ.ರಘುಮೂರ್ತಿ, ಮೂರು ಬಾರಿ ಈ ಕ್ಷೇತ್ರದ ಜನ ನನ್ನನ್ನು ಆಯ್ಕೆ ಮಾಡಿ ಗುರುತರವಾದ ಜವಾಬ್ದಾರಿ ನೀಡಿದ್ದಾರೆ. ನಾನು ಯಾವುದೇ ಸ್ಥಾನ ಅಲಂಕರಿಸಿದರೂ ಮತದಾರರಿಗೆ ನ್ಯಾಯಕೊಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತೇನೆ. ಇನ್ನೂ ಹೆಚ್ಚಿನ ಅಭಿವೃದ್ಧಿಯನ್ನು ಈ ಕ್ಷೇತ್ರದಲ್ಲಿ ಕೈಗೊಳ್ಳಬೇಕೆಂಬ ಅಭಿಲಾಷೆ ಇದೆ. ಸರ್ಕಾರದಿಂದ ಇನ್ನೂ ಹೆಚ್ಚಿನ ಅನುದಾನವನ್ನು ಕೇಳಿ ಪಡೆದು ಕಾಮಗಾರಿಗಳನ್ನು ಅನುಷ್ಠಾನಗೊಳಿಸುವ ಭರವಸೆ ನೀಡಿದರು. ಪಕ್ಷದ ಕಾರ್ಯಕರ್ತರು, ಮುಖಂಡರು ಪಕ್ಷದ ಗೌರವ, ಘನತೆಯನ್ನು ಎತ್ತಿಹಿಡಿಯುವ ಸಂಕಲ್ಪ ಮಾಡಬೇಕು. ಯಾವುದೇ ಚುನಾವಣೆಯಾವುದೇಸಂದರ್ಭದಲ್ಲಾಗಲಿ ಪಕ್ಷದ ಗೆಲುವಿಗೆ ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕೆಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ನಗರಸಭೆ ಅಧ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷೆ ಕವಿತಾಬೋರಯ್ಯ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ, ಚಳ್ಳಕೆರೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ನಗರಸಭೆ ನಾಮಿನಿ ಸದಸ್ಯರು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಟಿ.ರವಿಕುಮಾರ್, ಬಾಬುರೆಡ್ಡಿ, ಕಾರ್ಯದರ್ಶಿ ಪಿ.ತಿಪ್ಪೇಸ್ವಾಮಿ, ಆರ್.ಪ್ರಸನ್ನಕುಮಾರ್, ಸೇವಾದಳದ ಕೆ.ಸೈಪುಲ್ಲಾ, ಟಿ.ಆರ್.ಕಿರಣ್‌ಶಂಕರ್ ಮುಂತಾದವರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷಾ ಕಾರ್ಯಾವಧಿ ವಿಸ್ತರಣೆ

» ದಾವಣಗೆರೆ

ಪರಿಶಿಷ್ಟ ಜಾತಿಯ ಸಮಗ್ರ ಸಮೀಕ್ಷೆ ಕಾರ್ಯದ ವೈಜ್ಞಾನಿಕ ದತ್ತಾಂಶವನ್ನು ಸಂಗ್ರಹಿಸಲು ಮೇ.5 ರಿಂದ ಮನೆ ಮನೆ ಭೇಟಿ ಮೂಲಕ ರಾಜ್ಯಾದ್ಯಂತ ಈಗಾಗಲೇಸಮೀಕ್ಷೆಯನ್ನುಪ್ರಾರಂಭಿಸಲಾಗಿರುತ್ತದೆ. ರಾಜ್ಯಾದ್ಯಂತ ಸಮೀಕ್ಷೆಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕಾಗಿರುವುದರಿಂದ ಜೂನ್ 9 ರಿಂದ 22ರವರೆಗೆ ಸಮೀಕ್ಷೆಯನ್ನು ಅವಧಿಯನ್ನು ವಿಸ್ತರಿಸಲಾಗಿದೆ. ಸಮೀಕ್ಷೆಯಲ್ಲಿ ಇದುವರೆಗೂ ಭಾಗವಹಿಸದೇ ಇರುವ ಕರ್ನಾಟಕ ರಾಜ್ಯಕ್ಕೆ ಸೇರಿದ ಪರಿಶಿಷ್ಟ ಜಾತಿ ಕುಟುಂಬದವರು ನಾಗರೀಕ ಸೇವಾ ಕೇಂದ್ರಗಳಾದ ಕರ್ನಾಟಕ ಒನ್, ಬೆಂಗಳೂರು ಒನ್ ಮತ್ತು ಗ್ರಾಮ ಒನ್ ಕೇಂದ್ರಗಳು, ಬಾಪೂಜಿ ಸೇವಾ ಕೇಂದ್ರ ಬಿ.ಬಿ.ಎಂ.ಪಿ ವ್ಯಾಪ್ತಿಯ 198 ಬಿ.ಬಿ.ಎಂ.ಪಿ ವಾರ್ಡ್ ಕಚೇರಿಗಳಲ್ಲಿ ವ್ಯವಸ್ಥೆಮಾಡಿಕೊಂಡಿರುವ ಪ್ರತ್ಯೇಕವಾದ ಶಿಬಿರಗಳಲ್ಲಿ ಸಮೀಕ್ಷೆಗೆ ಅವಕಾಶವನ್ನು ಕಲ್ಪಿಸಲಾಗಿದೆ. ಹಾಗೂ ಆನ್ ಲೈನ್ https://schedulecastesurvey.karnataka.gov.in/selfdeclaration ಲಿಂಕ್ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳುವ ವಿಧಾನವನ್ನು ಸಹ ಜೂನ್ 22 ರವರೆಗೆ ವಿಸ್ತರಿಸಲಾಗಿದೆ ಎಂದು ಹರಿಹರ ಸಮಾಜಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ನೈಸರ್ಗಿಕ ಸಂಪತ್ತನ್ನು ಸಂರಕ್ಷಣೆ ಮಾಡುವ ಜವಾಬ್ದಾರಿಪ್ರತಿಯೊಬ್ಬರ ಮೇಲಿದೆ: ಚಂದ್ರಶೇಖರ್




» ಚಳ್ಳಕೆರೆ

ನಮ್ಮ ಸುತ್ತಮುತ್ತಲ ಪರಿಸರ ನೈಸರ್ಗಿಕವಾಗಿದ್ದರೆ ಮಾತ್ರ ನಾವೆಲ್ಲರೂ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು. ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ ಎಂದು ಬಳ್ಳಾರಿ ವೃತ್ತವಲಯ ಅರಣ್ಯ ಸಂರಕ್ಷಣಾಧಿಕಾರಿ ಸಿ.ಎಫ್. ಚಂದ್ರಶೇಖರ್‌ನಾಯಕ ತಿಳಿಸಿದರು. ಅವರು ಮಂಗಳವಾರ ಕುರುಡಿಹಳ್ಳಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ ಅರಣ್ಯ ಇಲಾಖೆ ಹಮ್ಮಿಕೊಂಡಿದ್ದ ವಿಶ್ವಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಗಿಡನೆಡುವ ಮೂಲಕ ಚಾಲನೆ ನೀಡಿ ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಜೊತೆಯಲ್ಲೇ ಸಾಮಾಜಿಕ ಕಳಕಳಿಯನ್ನು ಸಹ ಹೊಂದಬೇಕಾಗುತ್ತದೆ. ಮರಗಿಡಗಳನ್ನು ಉಳಿಸಿ, ಬೆಳೆಸುವ ಕಾರ್ಯಕ್ಕೆ ನೀವು ಸಹ ಕೈಜೋಡಿಸಬೇಕಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ತಮ್ಮ ವ್ಯಾಪ್ತಿಯಲ್ಲಿ ವರ್ಷಕ್ಕೆ ಒಂದು ಗಿಡವನ್ನಾದರೂ ನೆಟ್ಟು ಪೋಷಿಸುವ ಅಭ್ಯಾಸವನ್ನು ಬೆಳೆಸಿಕೊಳ್ಳುವಂತೆ ಮನವಿ ಮಾಡಿದರು. ಪ್ರಾಸ್ತಾವಿವಾಗಿ ಮಾತನಾಡಿದ ಹಿರಿಯೂರು ಉಪವಿಭಾಗದ ಅರಣ್ಯ ಸಂರಕ್ಷಣಾಧಿಕಾರಿ ಎಸ್.ಸುರೇಶ್, ಪ್ರತಿವರ್ಷ ಜೂನ್ ತಿಂಗಳು ಅರಣ್ಯ ಇಲಾಖೆ ಈ ಕಾರ್ಯಕ್ರಮ ಹಮ್ಮಿಕೊಳ್ಳುತ್ತಿದೆ. ಕಾರಣ ಜೂನ್ ತಿಂಗಳಲ್ಲಿ ಮಳೆ ಆರಂಭಕಾಲ, ಗಿಡಗಳನ್ನು ನೆಟ್ಟನಂತರ ಉತ್ತಮ ಮಳೆಯಾದಲ್ಲಿ ಗಿಡಗಳ ಬೆಳವಣಿಗೆಗೆ ಹೆಚ್ಚು ಅನುಕೂಲವಾಗುತ್ತದೆ. ಹಿರಿಯೂರು ಉಪವಿಭಾಗದ ಎಲ್ಲಾ ಅರಣ್ಯ ಇಲಾಖೆ ಕಚೇರಿ ಈ ಜಾಗೃತಿ ಕಾರ್ಯಕ್ರಮವನ್ನು ಜೂನ್ 5ರಿಂದಲೇ ಆರಂಭಸಿದ್ದು ಈಗಾಗಲೇ ಸಾವಿರಾರು ಗಿಡಗಳನ್ನು ನೆಡಲಾಗಿದೆ ಎಂದರು. ಚಳ್ಳಕೆರೆ ವಲಯ ಅರಣ್ಯಾಧಿಕಾರಿ ಎಸ್.ವಿ.ಮಂಜುನಾಥ ಮಾತನಾಡಿ, ಅರಣ್ಯ ಇಲಾಖೆಯಅಧಿಕಾರಿಗಳು ವಿಶ್ವಪರಿಸರದಿನಾಚರಣೆ ಕಾರ್ಯಕ್ರಮವನ್ನು ಜಾಗೃತಿ ಕಾರ್ಯಕ್ರಮವನ್ನಾಗಿ ಪರಿವರ್ತಿಸಿದ್ದಾರೆ. ಕೇವಲ ನಗರಮಟ್ಟದಲ್ಲಿಯ ಪ್ಷೇಯಲ್ಲದೆ, ಗ್ರಾಮೀಣ ಮಟ್ಟದಲ್ಲೂ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಎಚ್.ಸುರೇಶ್, ಶಿಕ್ಷಕರು, ವಿದ್ಯಾರ್ಥಿಗಳು, ಅರಣ್ಯ ಇಲಾಖೆಯ ನಿತಿನ್‌ಬಲ್ಲೂರು ಮಸ್ತಾನ್, ದರ್ಶನ್, ಗುರುಲಿಂಗೇಶ್, ರಾಜೇಶ್, ಇಮಾಮ್, ಜಿ.ಎಸ್.ನಾಯಕ್ ಮುಂತಾದವರು ಭಾಗವಹಿಸಿದ್ದರು.

### ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿಗೆ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ವೆಬ್‌ಸೈಟ್ ತಿತಿತಿ.ಇಚಿಣಾಚಿಟಇಚಿಡಿ.ಛಿಂಟ ಮೂಲಕ ಜುಲೈ 4 ರೊಳಗಾಗಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ http://kmcdc.karnataka.gov.in 8867537799, 080-29903994, ದೂ.ಸಂ: 08192-230934 ನ್ನು ಸಂಪರ್ಕಿಸಬಹುದೆಂದು ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

---

ವಿಸ್ತೃತ ಯೋಜನಾ ವರದಿ ತಯಾರಿಸಲು ಪೂರ್ವಭಾವಿ ಸಭೆಯಲ್ಲಿ ಸಚಿವ ಡಿ.ಸುಧಾಕರ್ ಸೂಚನೆ

# ವಿವಿ ಸಾಗರವನ್ನು ಕೆಆರ್‌ಎಸ್ ಮಾದರಿಯಲ್ಲಿ ಪ್ರವಾಸಿತಾಣವನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ವಾಣಿ ವಿಲಾಸ ಸಾಗರ ಜಲಾಶಯವನ್ನು ಕೆ.ಆರ್.ಎಸ್. ಮಾದರಿಯಲ್ಲಿ ಪ್ರವಾಸಿ ತಾಣವನ್ನಾಗಿ ಮೇಲ್ದರ್ಜೆಗೇರಿಸಲು ಯೋಜನೆ ರೂಪಿಸಲಾಗಿದ್ದು, ಹಿರಿಯೂರು ಪಟ್ಟಣದ ವಿವಿಪುರ ಕ್ರಾಸ್‌ನಿಂದ ವಿವಿಪುರ ಗ್ರಾಮದ ಕಣಿವೆ ಮಾರಮ್ಮ ದೇವಸ್ಥಾನದವರೆಗೆ ಇರುವ 17.50 ಕಿ.ಮೀ ರಸ್ತೆಯನ್ನು ಅಗಲೀಕರಣ ಮಾಡಲು ಅಗತ್ಯ ಕ್ರಮವಹಿಸುವಂತೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಬೆಂಗಳೂರಿನ ವಿಕಾಸಸೌಧದಲ್ಲಿ ಮಂಗಳವಾರ ಈ ಸಂಬಂಧ ಅಧಿಕಾರಿಗಳ ಸಭೆ ನಡೆಸಿದ ಜಿಲ್ಲಾ ಉಸ್ತುವಾರಿ ಸಚಿವರು, ಹಿರಿಯೂರು ತಾಲ್ಲೂಕಿನ ವಾಣಿ ವಿಲಾಸ ಸಾಗರ ಜಲಾಶಯವನ್ನು ಕೆ.ಆರ್.ಎಸ್. ಮಾದರಿಯಲ್ಲಿ ಪ್ರವಾಸಿ ತಾಣವನ್ನಾಗಿ ಮೇಲ್ದರ್ಜೆಗೇರಿಸಲು ಯೋಜನೆ ರೂಪಿಸಲಾಗಿದ್ದು, ಈ ಸಂಬಂಧ ಮೊದಲನೇ ಹಂತದಲ್ಲಿ ವಿವಿಪುರ ಕ್ರಾಸ್‌ನಿಂದ ವಿವಿಪುರ ಗ್ರಾಮದವರೆಗೆ ಹಾಲಿ ಇರುವ ದ್ವಿಪಥದ ರಸ್ತೆಯನ್ನು ನಾಲ್ಕು ಪಥದ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸುವ ಸಂಬಂಧ ಕೈಗೊಳ್ಳಬೇಕಾದ ಭೂಸ್ವಾಧೀನ ಪ್ರಕ್ರಿಯೆಗಳಿಗೆ ಚಾಲನೆ ನೀಡಲು ತಿಳಿಸಿದರು. ಪ್ರಸ್ತುತ ಈ ರಸ್ತೆಯು ಲೋಕೋಪಯೋಗಿ ಇಲಾಖೆಗೆ ಸೇರಿದ್ದು, ಭೂಸ್ವಾಧೀನಕ್ಕೆ ತಗಲಬಹುದಾದ ವೆಚ್ಚವನ್ನು ಲೋಕೋಪಯೋಗಿ ಇಲಾಖೆಯಿಂದ ಬಿಡುಗಡೆಗೊಳಿಸಲು ಮತ್ತು ನಾಲ್ಕು ಪಥದ ರಸ್ತೆ ನಿರ್ಮಾಣ ಮತ್ತು ಪ್ರವಾಸಿ ತಾಣ ಅಭಿವೃದ್ಧಿ ಕಾಮಗಾರಿಗಳನ್ನು ಜಲ ಸಂಪನ್ಮೂಲ ಇಲಾಖೆಯ ಅಡಿಯಲ್ಲಿ ಬರುವ ವಿಶ್ವೇಶ್ವರಯ್ಯ ಜಲ ನಿಗಮದಿಂದ ಕೈಗೆತ್ತಿಕೊಳ್ಳಲು ಮತ್ತು ಈ ಪ್ರಸ್ತಾವನೆಗೆ ಆಗಬಹುದಾದ ವಿಸ್ತೃತವಾದ ಯೋಜನಾ ವರದಿಯನ್ನು ತಯಾರಿಸಲು ವಿಶ್ವೇಶ್ವರಯ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕರಿಗೆ ಸೂಚಿಸಲಾಯಿತು.

ಭೂಸ್ವಾಧೀನ ಸಂಬಂಧ ಕೈಗೊಳ್ಳಬೇಕಾದ ಕ್ರಮಗಳನ್ನು ಚಿತ್ರದುರ್ಗ ಜಿಲ್ಲಾಧಿಕಾರಿಗಳು ಲೋಕೋಪಯೋಗಿ ಇಲಾಖೆಯ ಸಹಕಾರದೊಂದಿಗೆ ಜಂಟಿ ಸರ್ವೆ ಮಾಡಿ ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳಲು ನಿರ್ದೇಶನ ನೀಡಲಾಯಿತು.

ಸಭೆಯಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯದರ್ಶಿ ಸತ್ಯ ನಾರಾಯಣ, ಜಲ ಸಂಪನ್ಮೂಲ ಇಲಾಖೆಯ ಕಾರ್ಯದರ್ಶಿ ಕೃಷ್ಣಮೂರ್ತಿ.ಬಿ.ಕುಲಕರ್ಣಿ, ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ವಿಶ್ವೇಶ್ವರಯ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಸಣ್ಣ ಚಿತ್ತಯ್ಯ, ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಇಂಜಿನಿಯರ್ ಎಫ್.ಹೆಚ್.ಲಂಬಾಣಿ, ಕಾರ್ಯಪಾಲಕ ಇಂಜಿನಿಯರ್ ಬಾರಿಕರ ಚಂದ್ರಪ್ಪ, ಲೋಕೋಪಯೋಗಿ ಕಾರ್ಯಪಾಲಕ ಇಂಜಿನಿಯರ್ ನಾಗರಾಜ್, ಹಿರಿಯೂರು ತಹಶೀಲ್ದಾರ್ ರಾಜೇಶ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

---

ಸೊಳ್ಳೆಗಳಿಂದ ಹರಡುವ ರೋಗಗಳ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಡಾ.ಕಾಶೀ

## ಡೆಂಗ್ಯೂ ಜ್ವರ ನಿಯಂತ್ರಣ ನಮ್ಮೆಲ್ಲರ ಜವಾಬ್ದಾರಿ

» ಚಿತ್ರದುರ್ಗ

ಸೊಳ್ಳೆ ಚಿಕ್ಕದು, ಕಾಟ ದೊಡ್ಡದು. ಡೆಂಗ್ಯೂ ಜ್ವರ ನಿಯಂತ್ರಣ ನಮ್ಮೆಲ್ಲರ ಜವಾಬ್ದಾರಿ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶೀ ಹೇಳಿದರು.



ನಗರದ ವಾಸವಿ ವಿದ್ಯಾಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಸೊಳ್ಳೆಗಳಿಂದ ಹರಡುವ ರೋಗಗಳ ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈಡೀಸ್ ಈಜಿಪ್ಟಿ ಎಂಬ ಸೊಳ್ಳೆ ಶುದ್ಧವಾದ ನೀರಲ್ಲಿ ಬೆಳೆದು ಹಗಲು ಹೊತ್ತು ಮನುಷ್ಯರನ್ನ ಕಚ್ಚುವುದರಿಂದ ಡೆಂಗ್ಯೂ ಜ್ವರ ಬರುತ್ತವೆ. ಸೊಳ್ಳೆ ಉತ್ಪತ್ತಿ ತಾಣಗಳಾದ ಮನೆಯಲ್ಲಿನ ತೊಟ್ಟಿಗಳು, ಡ್ರಮ್‌ಗಳು ಹಾಗೂ ಮನೆಯ ಹೊರಗಡೆ ತೆಂಗಿನ ಚಿಪ್ಪುಗಳು, ಕೋಳಿ ಮೊಟ್ಟೆ ಚಿಪ್ಪುಗಳು, ಒಡೆದ ಬಾಟಲಿಗಳಲ್ಲಿ ಮಳೆಗಾಲವಾದ್ದರಿಂದ ಶುದ್ಧವಾದ ನೀರು ಸಂಗ್ರಹ ವಾಗುವ ಸಾಧ್ಯತೆ ಇದ್ದು, ಇಂತಹ ನೀರಿನಲ್ಲಿ ಸೊಳ್ಳೆ ಮೊಟ್ಟೆ ಇಡುತ್ತವೆ. ಒಳ್ಳೆ ಸಂತತಿ ನಾಶ ಮಾಡಲು ನಿರುಪಯುಕ್ತ ವಸ್ತುಗಳನ್ನು ದೂರ ವಿಲೇವಾರಿ ಮಾಡಬೇಕು. ಮನೆಯಲ್ಲಿನ ನೀರಿನ ತಾಣಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಿ ಒಣಗಿಸಿ ಸುಣ್ಣ ಬಳಿದು ನೀರು ಶೇಖರಿಸಿ ಭದ್ರವಾಗಿ ಮುಚ್ಚಡಬೇಕು ಎಂದರು.

ಶಾಲೆಗೆ ಬರುವಾಗ ಮಕ್ಕಳು ತುಂಬು ತೋಳಿನ ಬಟ್ಟೆಗಳನ್ನು ಧರಿಸಬೇಕೆಂದರು. ಜಿಲ್ಲೆಯಲ್ಲಿ ಕಳೆದ ವರ್ಷ ಜನವರಿ 2024 ರಿಂದ ಮೇ ತಿಂಗಳ 2024ರ ವರೆಗೆ ಒಟ್ಟು 210 ಡೆಂಗ್ಯೂ ಪ್ರಕರಣಗಳು ವರದಿಯಾಗಿವೆ. ಅದರಲ್ಲಿ ಚಿತ್ರದುರ್ಗ ನಗರದಲ್ಲಿ 68 ವರದಿಯಾಗಿದ್ದು, 2025 ಜನವರಿಯಿಂದ ಮೇ 2025ರ ಅವಧಿಯಲ್ಲಿ ಒಟ್ಟು ಜಿಲ್ಲೆಯಲ್ಲಿ 55 ಡೆಂಗ್ಯೂ ಪ್ರಕರಣಗಳು ಅದರಲ್ಲಿ ಚಿತ್ರದುರ್ಗ ನಗರದಲ್ಲೇ 18 ಡೆಂಗ್ಯೂ ಪ್ರಕರಣಗಳು ವರದಿಯಾಗಿವೆ. ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಡೆಂಗ್ಯೂ ಪ್ರಕರಣಗಳ ಸಂಖ್ಯೆ ಇಳಿಮುಖ ಕಂಡಿದ್ದು, ಆದರೂ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವುದರ ಮುಖಾಂತರ ರೋಗ ಹರಡದಂತೆ ಸರ್ವರೂ ಶ್ರಮಿಸಬೇಕು ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ. ಮೂಗಪ್ಪ ಮಾತನಾಡಿ, "ಸೊಳ್ಳೆ ಚಿಕ್ಕದು. ಕಾಟ ದೊಡ್ಡದು" "ನೀರಿನಲ್ಲಿನ ಹುಳಗಳು ಸೊಳ್ಳೆ ಮರಿಗಳ" "ಯಾವುದೇ ಜ್ವರ ಇರಲಿ ರಕ್ತಪರಿಕ್ಷ ಮಾಡಿಸಿ" ಎಂದು ವಿದ್ಯಾರ್ಥಿಗಳಿಂದ ಘೋಷಣೆಗಳನ್ನು ಕೂಗಿಸಿದರು. ಈ ವೇಳೆ ಈಡೀಸ್ ಲಾರ್ವ ಮತ್ತು ಲಾರ್ವಹಾರಿ ಮೀನುಗಳನ್ನು ಪ್ರದರ್ಶಿಸಲಾಯಿತು.

ಕಾರ್ಯಕ್ರಮದಲ್ಲಿ ವಾಸವಿ ವಿದ್ಯಾ ಸಂಸ್ಥೆಯ ವ್ಯವಸ್ಥಾಪಕ ಗೋಪಾಲಕೃಷ್ಣ ಮಾತನಾಡಿ, ಶಾಲೆಯನ್ನು ಸದಾ ಸೊಳ್ಳೆಮುಕ್ತ ಲಾರ್ವ ಮುಕ್ತ ಮಾಡುತ್ತೇವೆ ಎಂದರು.ಮುಖ್ಯ ಶಿಕ್ಷಕಿ ಕೆ.ಆರ್.ರಾಧಾಮಣಿ ಮಾತನಾಡಿ, ರೋಗ ಬಂದ ಮೇಲೆ ಅನುಭವಿಸುವುದಕ್ಕಿಂತ ರೋಗ ಬಾರದಂತೆ ತಡೆಯುವುದು ಒಳ್ಳೆಯದು ಎಂದರು. ಕಾರ್ಯಕ್ರಮದಲ್ಲಿ ವಾಸವಿ ವಿದ್ಯಾಸಂಸ್ಥೆಯ ಅಧ್ಯಕ್ಷ ಸತ್ಯನಾರಾಯಣಶೆಟ್ಟಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀನಿವಾಸ ಮಳಲಿ, ನಾಗರಾಜು, ಗುರುಮೂರ್ತಿ, ನಿತಿನ್ ಸೇರಿದಂತೆ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

---

## ಸ್ವಚ್ಛತೆ ಒಂದು ದಿನಕ್ಕೆ ಸೀಮಿತವಾಗದಿರಲಿ: ದ್ಯಾಮಣ್ಣ




» ಚಿತ್ರದುರ್ಗ

ಸ್ವಚ್ಛತೆ ಒಂದು ದಿನದ ಕಾರ್ಯಕ್ರಮ ಆಗಬಾರದು ಎಂದು ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷರು ಹಾಗೂ ಡಿಸಿಸಿ ಬ್ಯಾಂಕ್ ನಿರ್ದೇಶಕ ಹೆಚ್.ಎಂ.ದ್ಯಾಮಣ್ಣ ಹೇಳಿದರು. ನಗರದ ಕೆಳಗೋಟೆಯ ಬಿ.ಎಲ್. ಗೌಡ ಲೇಔಟ್‌ನ ಸಹಕಾರ ಭವನದ ಜಿಲ್ಲಾ ಸಹಕಾರ ಯೂನಿಯನ್‌ನಲ್ಲಿ ಮಂಗಳವಾರ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ, ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಹಾಗೂ ಆರೋಗ್ಯವೇ ಭಾಗ್ಯಯುವಕರ ಸಂಘದ ಆಶ್ರಯದಲ್ಲಿ ಅಂತರಾಷ್ಟ್ರೀಯ ಸಹಕಾರ ವರ್ಷಾಚರಣೆ-2025ರ ಅಡಿಯಲ್ಲಿ "ಸ್ವಚ್ಛತಾ ಸೇ ಸಹಕಾರ" (ಸಹಕಾರದಿಂದ ಸ್ವಚ್ಛತೆ) ಅಭಿಯಾನದಲ್ಲಿ ಅವರು ಮಾತನಾಡಿದರು.

ಸ್ವಚ್ಛತೆ ಇದು ಒಂದು ದಿನದ ಕಾರ್ಯಕ್ರಮ ಆಗಬಾರದು. ನಾವು ನಮ್ಮ ಕಛೇರಿ, ಮನೆಗಳ ಸುತ್ತ ಮುತ್ತಲಿನ ಆವರಣವನ್ನು ದಿನ ನಿತ್ಯ ಸ್ವಚ್ಛತೆಯಿಂದ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು. ಆರೋಗ್ಯವೇ ಭಾಗ್ಯ ಯುವಕರ ಸಂಘದ ನಿರ್ದೇಶಕ ಕಲ್ಲೇಶ್ ಡಿ.ಮೌರ್ಯ ಅವರು ಸ್ವಚ್ಛತೆ ಅಭಿಯಾನದ ವಿಷಯ ಕುರಿತು ನಮ್ಮ ಪರಿಸರವನ್ನು ಹೇಗೆ ಸ್ವಚ್ಛತೆಯಿಂದ ಕಾಪಾಡಿಕೊಳ್ಳಬೇಕು ಎಂಬ ಬಗ್ಗೆ ಉಪನ್ಯಾಸ ನೀಡಿದರು. ಕಾರ್ಯಕ್ರಮದ ನಂತರ ಸಹಕಾರ ಭವನಆವರಣದ ಸುತ್ತ ಮುತ್ತಸ್ವಚ್ಛತೆ ಮಾಡಲಾಯಿತು. ಸ್ವಚ್ಛತೆ ಅಭಿಯಾನ ಕಾರ್ಯಕ್ರಮದಲ್ಲಿ ಶಿವಮೊಗ್ಗ ಹಾಲು ಒಕ್ಕೂಟ ಹಾಗೂ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿ.ಬಿ.ಶೇಖರಪ್ಪ, ಸಹಕಾರ ಸಂಘಗಳ ಉಪನಿಬಂಧಕ ಆರ್. ಎಸ್.ದಿಲೀಪ್ ಕುಮಾರ್, ಸಹಾಯಕ ನಿಬಂಧಕ ಬಾಹುಬಲಿ ಹಂಜೆ, ಯೂನಿಯನ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪಿ.ಜಯಶ್ರೀ ಹುನಗುಂದ, ಜಿಲ್ಲಾ ಸಹಕಾರ ಶಿಕ್ಷಕ ನಾಗರಾಜ್ ಪಾಟೀಲ್, ಆರೋಗ್ಯ ಭಾಗ್ಯ ಯುವಕರ ಸಂಘದ ಅಧ್ಯಕ್ಷ ಪರಶುರಾಮ್, ಉಪಾಧ್ಯಕ್ಷ ಶ್ರೀನಿವಾಸ್ ಸೇರಿದಂತೆ ಸಹಕಾರ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಡಿಸಿಸಿ ಬ್ಯಾಂಕ್, ಜಿಲ್ಲಾ ಸಹಕಾರ ಯೂನಿಯನ್ ಸಿಬ್ಬಂದಿ ವರ್ಗದವರು ಇದ್ದರು.

### ಶೋಷಿತ ಸಮುದಾಯದ ಆಶಾಕಿರಣ ಪ್ರೊ.ಬಿ.ಕೃಷ್ಣಪ್ಪ

**ಚಳ್ಳಕೆರೆ:** ಶೋಷಿತ ದಲಿತ ಸಮುದಾಯದ ಅಭ್ಯುದಯಕ್ಕಾಗಿ ಪ್ರೊ.ಬಿ.ಕೃಷ್ಣಪ್ಪನವರ ಚಿಂತನೆ ಮತ್ತು ಹೋರಾಟಗಳನ್ನು ಅಳವಡಿಸಿಕೊಂಡು ಮುನ್ನಡೆಯಬೇಕಿದೆ. ಪ್ರೊ.ಬಿ.ಕೃಷ್ಣಪ್ಪನವರು ದಲಿತ ಸಮುದಾಯದ ಸರ್ವತೋಮುಖ ಅಭಿವೃದ್ಧಿಯ ಬಗ್ಗೆ ಚಿಂತನೆ ನಡೆಸಿದ ಮಹಾನ್‌ವ್ಯಕ್ತಿ ಎಂದು ಚಿಂತಕ ಡಾ.ಶ್ರೀನಿವಾಸ್‌ರಾಜುದೊಡ್ಡೇರಿ ತಿಳಿಸಿದರು. ಅವರು, ಪಾವಗಡ ರಸ್ತೆಯ ಕನ್ನಡ ಸಾಂಸ್ಕೃತಿಕ ಸಂಸ್ಥೆ ಕಚೇರಿಯಲ್ಲಿ ಪ್ರೊ.ಬಿ.ಕೃಷ್ಣಪ್ಪನವರ 87ನೇ ಹುಟ್ಟುಹಬ್ಬ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಇಂತಹ ಮಹಾನೀಯರ ಹುಟ್ಟುಹಬ್ಬ ಆಚರಣೆ ಎಲ್ಲರಿಗೂ ಸ್ಫೂರ್ತಿತರಲಿದೆ ಎಂದರು.



### ಅವಧಿ ವಿಸ್ತರಣೆ

**ದಾವಣಗೆರೆ:** ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ವತಿಯಿಂದ ಪ್ರಸಕ್ತ ಸಾಲಿನ ಪ್ರಥಮ ವರ್ಷದ ಡಿ.ಇಎಲ್.ಇಡಿಗೆ ದಾಖಲಾತಿ ಪಡೆಯಲು ಜೂನ್ 25 ರವರೆಗೆ ವಿಸ್ತರಿಸಲಾಗಿದೆ ಎಂದು ಡಯಟ್ ಪ್ರಾಚಾರ್ಯರರು ತಿಳಿಸಿದ್ದಾರೆ.

---

**ಪ್ರಮುಖ ಸುದ್ದಿ**

ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ಎಸ್.ನಾಗಸಮುದ್ರ ಕರೆ

# ವಿಶ್ವ ಯೋಗ ದಿನಾಚರಣೆ ಯಶಸ್ವಿಗೊಳಿಸಿ

» ಚಿತ್ರದುರ್ಗ

ಚಿತ್ರದುರ್ಗ ನಗರದ ಹೃದಯಭಾಗದಲ್ಲಿರುವ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಇದೇ ಜೂನ್ 21ರಂದು ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮವನ್ನು ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಗಿದ್ದು, ವಿಶ್ವ ಯೋಗ ದಿನಾಚರಣೆಯನ್ನು ಯಶಸ್ವಿಗೊಳಿಸುವಂತೆ ಜಿಲ್ಲಾಆಯುಷ್‌ಅಧಿಕಾರಿಡಾ.ಚಂದ್ರಕಾಂತ್ ಎಸ್.ನಾಗಸಮುದ್ರ ಅವರು ನಾಗರಿಕರಿಗೆ ಮನವಿ ಮಾಡಿದರು.



ನಗರದ ಜಿಲ್ಲಾ ಆಯುಷ್ ಕಚೇರಿ ಸಭಾಂಗಣದಲ್ಲಿ ಸೋಮವಾರ ಜೂನ್ 21ರಂದು ಆಚರಿಸಲಾಗುವ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮ ಅಂಗವಾಗಿ ಜಿಲ್ಲಾ ಆಯುಷ್ ಇಲಾಖೆ ನೇತೃತ್ವದಲ್ಲಿ ಹಮ್ಮಿಕೊಂಡಿರುವ ಜಿಲ್ಲಾ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. 11ನೇ ವರ್ಷದ ವಿಶ್ವ ಯೋಗ ದಿನಾಚರಣೆಗೆ ಈಗಾಗಲೇ ಸಕಲ ಸಿದ್ಧತೆ ಕೈಗೊಳ್ಳಲಾಗುತ್ತಿದ್ದು, ಯೋಗ ದಿನಾಚರಣೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಇದೇ ಜೂನ್ 19ರಂದು ಬೆಳಿಗ್ಗೆ 7ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಿಂದ ನಗರದೆಲ್ಲೆಡೆ ಯೋಗ ನಡಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಎಲ್ಲಾ ಕಾರ್ಯಕ್ರಮಗಳಿಗೆ ಚಿತ್ರದುರ್ಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿವಿಧ ಇಲಾಖೆಗಳು ಹಾಗೂ ಮುಖ್ಯವಾಗಿ ಜಿಲ್ಲೆಯ ಯೋಗ ಸಾಧಕರ ಸಹಕಾರ ಅಗತ್ಯವಾಗಿದೆ. ಎಲ್ಲರೂ ಜಿಲ್ಲಾ ಆಯುಷ್ ಇಲಾಖೆಯೊಂದಿಗೆ ಕೈಜೋಡಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಕೋರಿದರು.

11ನೇ ವರ್ಷದ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮದ ರೂಪುರೇಷೆಗಳನ್ನು ತಿಳಿಸಿ ಮಾತನಾಡಿದ ಆಯುಷ್ ಇಲಾಖೆಯ ಹಿರಿಯ ವೈದ್ಯಾಧಿಕಾರಿ ಡಾ.ಟಿ.ಶಿವಕುಮಾರ್, ವಿಶ್ವ ಯೋಗ ದಿನಾಚರಣೆಗೆ ದಶಮಾನೋತ್ಸವ ಪೂರ್ಣಗೊಂಡಿರುವ ಹಿನ್ನಲೆಯಲ್ಲಿ ಯೋಗ ಸಂಗಮ, ಯೋಗ ಸಂಧಾನ, ಯೋಗ ಬಂಧನ, ಹರಿತ್ ಯೋಗ, ಯೋಗೋದ್ಯಾನ , ಜಠರಂಚಿ ಣಟಿ ಔಟಣರಂಜಜ, ಧನುಷ್ ಯೋಗ, ಮಹಾಕುಂಬ್, ಯೋಗ ಪ್ರಭಾವ ಹೀಗೆ 10 ವಿಶಿಷ್ಟ ಬಗೆಯ ಯೋಗ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಎಲ್ಲಾ ಕಾರ್ಯಕ್ರಮಗಳಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಪಾಲ್ಗೊಂಡು ಪ್ರಯೋಜನ ಪಡೆಯಬೇಕು ಎಂದು ತಿಳಿಸಿದರು.

ಸಭೆಯಲ್ಲಿ ನಗರದ ವಿವಿಧ ಯೋಗ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಆಯುಷ್ ವೈದ್ಯಾಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಡಿ.ದೇವರಾಜು ಅರಸು ಅಭಿವೃದ್ಧಿ ನಿಗಮ: ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಮಗದಿಂದ 2025-26ನೇ ಸಾಲಿಗೆ ಡಿ.ದೇವರಾಜು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ, ಹೊಲಿಗೆ ಯಂತ್ರ ವಿತರಣೆ, ಸ್ವಾತಂತ್ರ್ಯ ಅಮೃತ ಮಹೋತ್ಸವ ಮನ್ನಡೆ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಮರಾಠ ಇವುಗಳ ಉಪ ಸಮುದಾಯಗಳನ್ನು ಹೊರತುಪಡಿಸಿ, ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ಸೇರಿದಂತೆ ಉಳಿದ ಜಾತಿಗಳಿಗೆ ಸೇರಿದವರು ಅರ್ಜಿ ಸಲ್ಲಿಸಬಹುದು. ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು. ಸರ್ಕಾರಿ ಸೌಲಭ್ಯವನ್ನು (ಸಾಲ ಸಹಾಯಧನ) ಪಡೆಯುವ ಸಂಬಂಧ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿಸಿರಬೇಕು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಗಳಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24 ಹಾಗೂ 2024-25ನೇ ಸಾಲಿಗೆ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಯೋಜನೆಗಳಡಿ ಸಹಾಯಧನ/ಸಾಲ-ಸೌಲಭ್ಯವನ್ನು ಪಡೆಯಲು ಇಚ್ಛಿಸುವವರ ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080-22374832, 8050770004 ಅಥವಾ 8050770005 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು. ಯೋಜನೆಗಳ ಮಾರ್ಗಸೂಚಿಗಳು, ಸಲ್ಲಿಸಬೇಕಾದ ದಾಖಲೆಗಳು, ಜಿಲ್ಲಾ ವ್ಯವಸ್ಥಾಪಕರ ಕಚೇರಿ ವಿಳಾಸವನ್ನು ಹಾಗೂ ಹೆಚ್ಚಿನ ವಿವರಗಳನ್ನು www.dbcdc.karnataka.gov.in ನಲ್ಲಿ ತಿಳಿಯಬಹುದು.

### ಗುರುತು ಪತ್ತೆಗೆ ಮನವಿ

» ಚಿತ್ರದುರ್ಗ

ಜೂನ್ 9 ರಂದು ಬೆಳಿಗ್ಗೆ 9:30 ಗಂಟೆಗೆ ಹೊಳಲ್ಕೆರೆ ರಾಮಗಿರಿ ರೈಲು ನಿಲ್ದಾಣಗಳ ಮಧ್ಯ ರೈಲು ಹಳಿಗಳ ಮೇಲೆ ಅನಾಮಧೇಯ ವ್ಯಕ್ತಿ ಶವ ಪತ್ತೆಯಾಗಿದೆ. ಈ ಕುರಿತು ದಾವಣಗೆರೆ ರೈಲ್ವೇ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತ ವ್ಯಕ್ತಿಯು ಸಮಾರು 55 ರಿಂದ 60 ವರ್ಷದವನಾಗಿದ್ದು, ಕೋಲುಮುಖ, ಸಾದ ಕಪ್ಪು, ಮೈಬಣ್ಣ, ಸಾದಾರಣ ಮೈಕಟ್ಟು, ತಲೆಯಲ್ಲಿ 2 ಇಂಚು ಉದ್ದದ ಕಪ್ಪು-ಬಿಳಿ ಮಿಶ್ರ ಬಣ್ಣದ ಕೂದಲು ಇವೆ. ಮುಂದಲೆ ಸ್ವಲ್ಪ ಬೊಕ್ಕು ತಲೆಯಾಗಿರುತ್ತದೆ. ಬಿಳಿ ಬಣ್ಣದ ಕುರುಚಲು ಗಡ್ಡ ಮೀಸೆ ಬಿಟ್ಟಿರುತ್ತಾನೆ. ಮೈಮೇಲೆ ಕಡು ನೀಲಿ ಬಣ್ಣದ ರೆಡಿಮೇಡ್ ಶರ್ಟ್, ಪಾಚಿ ಹಸಿರು ಬಣ್ಣದ ಬನಿಯನ್, ಹಸಿರು ಬಣ್ಣದ ಅಂಡರ್ ವೇರ್, ನೀಲಿ ಬಣ್ಣದ ಲುಂಗಿ, ಕಪ್ಪು-ನೀಲಿ ಗೆರೆಗಳಿರುವ ಚೆಕ್ಸ್ ಟವಲ್ ಧರಿಸಿರುತ್ತಾನೆ. ಮೃತ ವ್ಯಕ್ತಿಯ ಗುರುತು ಪತ್ತೆಯಾದಲ್ಲಿ ದಾವಣಗೆರೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08192-259643, ಮೊಬೈಲ್ ಸಂಖ್ಯೆ 9480802123, ರೈಲ್ವೇ ಕಂಟ್ರೋಲ್ ರೂಮ್ 080-22871291 ಗೆ ಕರೆ ಮಾಡುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

### ನೋಂದಣಿ ರದ್ದತಿಗೆ ಕ್ರಮ

■ ದಾವಣಗೆರೆ

ಸಹಕಾರ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ನಿಯಮಿತ, ಹರಿಹರ, ದಾವಣಗೆರೆ ಜಿಲ್ಲೆ. ಈ ಸಹಕಾರ ಸಂಘವು ಸಹಕಾರ ಸಂಘಗಳ ಕಾಯ್ದೆ ಹಾಗೂ ಬೈಲಾ ರೀತ್ಯಾ ಹಾಗೂ ಸ್ಥಾಪನೆ ಉದ್ದೇಶಗಳ ರೀತ್ಯಾ ಕಾರ್ಯ ಚಟುವಟಿಗಳನ್ನು ನಡೆಸದೆ ಸ್ಥಗಿತಗೊಂಡಿರುತ್ತದೆ. ಈ ಸಂಘವನ್ನು ಪುನ:ಶ್ಚೇತನಗೊಳಿಸಲು ಯಾರು ಮುಂದೆ ಬಂದಿರುವುದಿಲ್ಲ. ಈ ಸಹಕಾರ ಸಂಘದ ಲೆಕ್ಕ ಪುಸ್ತಕಗಳು, ಚರ ಮತ್ತು ಸ್ಥಿರಾಸ್ತಿಯ ಇರುವಿಕೆಯ ಬಗ್ಗೆ ಮಾಹಿತಿ ದೊರೆಯದ ಪ್ರಯುಕ್ತ ಸಂಘದ ಸಮಸ್ತ ಚಾರಾಸ್ತಿ ಪಡೆಯಲಾಗಿರುವುದಿಲ್ಲ. ಸಂಘದ ಸಿಬ್ಬಂದಿಯವರಾಗಲೀ, ಸದಸ್ಯರಾಗಲೀ, ಆಡಳಿತ ಮಂಡಳಿ ನಿರ್ದೇಶಕರಾಗಲೀ ಅಥವಾ ಸಾರ್ವಜನಿಕರಿಂದಾಗಲೀ, ಈ ಸಂಘದ ಲೆಕ್ಕ ಪುಸ್ತಕಗಳ ಇರುವಿಕೆಯ ಬಗ್ಗೆ ಮಾಹಿತಿ ಇದ್ದಲ್ಲಿ ದಾಖಲೆಗಳ ಸಹಿತ ಸಮಾಪಕರು ಸಹಕಾರ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ನಿಯಮಿತ, ಹರಿಹರ ಹಾಗೂ ಸಹಕಾರ ಅಭಿವೃದ್ಧಿ ಅಧಿಕಾರಿ, ಹರಿಹರ ಇವರಿಗೆ 15 ದಿನಗಳೊಳಗಾಗಿ ಸಲ್ಲಿಸುವುದು.ಈ ಅವಧಿಯೊಳಗಾಗಿ ಯಾವುದೇ ಅಹವಾಲು, ಮಾಹಿತಿ ಬಾರದೇ ಇದ್ದಲ್ಲಿ ಸಂಘದ ನೋಂದಣಿಯನ್ನು ರದ್ದು ಪಡಿಸಲು ಕ್ರಮವಿಡಲಾಗುವುದು. ನೋಂದಣಿ ರದ್ದತಿ ನಂತರ ಯಾವುದೇ ರೀತಿಯ ಜವಾಬ್ದಾರಿಗಳಿಗೆ ಸಮಾಪಕರು ಹೊಣೆಗಾರರಾಗುವುದಿಲ್ಲ ಹಾಗೂ ಯಾವುದೇ ಅಹವಾಲು ಇಲ್ಲವೆಂದು ನಡಾವಳಿ ಜರುಗಿಸಿನೋಂದಣಿರದ್ದತಿಮಾಡಲಾಗುವುದೆಂದು ಸಮಾಪನಾಧಿಕಾರಿ ತಿಳಿಸಿದ್ದಾರೆ.

---

ಚಿತ್ರದುರ್ಗದಲ್ಲಿ ಪೌರಕಾರ್ಮಿಕರ ಸಮಾಲೋಚನಾ ಸಭೆ

# ಪೌರಕಾರ್ಮಿಕರು ಕಾಯಕ ಯೋಗಿಗಳು

## ಸಿದ್ದರಾಮಯ್ಯ ಆಧುನೀಕ ಜೀತಪದ್ಧತಿ ಮುಕ್ತ ನೀತಿ ಹರಿಕಾರ -ಮಾಜಿ ಸಚಿವ ಹೆಚ್.ಆಂಜನೇಯ ಬಣ್ಣನೆ

» ಚಿತ್ರದುರ್ಗ



ಇಡೀ ದೇಶದಲ್ಲಿ ಎಲ್ಲಿಯೂ ಇಲ್ಲದಷ್ಟು ಅನುಕೂಲ ಪೌರಕಾರ್ಮಿಕರಿಗೆ ಸಿದ್ದರಾಮಯ್ಯ ಒದಗಿಸಿದ್ದಾರೆ. ಇನ್ನಷ್ಟು ಬೇಡಿಕೆಗಳು ಶೀಘ್ರ ಈಡೇರಿಸುವ ಭರವಸೆ ಇದೆ ಎಂದು ಮಾಜಿ ಸಚಿವ ಹೆಚ್. ಆಂಜನೇಯ ಹೇಳಿದರು.

ರಾಜ್ಯ ಪೌರಕಾರ್ಮಿಕ ಸಂಘದಿಂದ ನಗರದ ಗಾಯತ್ರಿ ಕಲ್ಯಾಣ ಮಂಪಟದಲ್ಲಿ ಸೋಮವಾರ ಆಯೋಜಿಸಿದ್ದ ಜಿಲ್ಲಾ ಪೌರಕಾರ್ಮಿಕರ ಸಮಾವೇಶದಲ್ಲಿ ಪ್ರೊ.ಬಿ.ಕೃಷ್ಣಪ್ಪ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪೌರಕಾರ್ಮಿಕರ ಬದುಕು ಅತ್ಯಂತ ನಿಕೃಷ್ಟ. ಲಕ್ಷ-ಲಕ್ಷ ಕೊಟ್ಟರೂ ಯಾರೂ ಮಾಡದ ಕೆಲಸ ಮಾಡುತ್ತಾರೆ. ಶೌಚಗುಂಡಿ, ಚರಂಡಿಗೆ ಇಳಿದು ಕೆಲಸ ಮಾಡುವುದು ಅತ್ಯಂತ ಅಮಾನವೀಯ. ಆದರೂ ಸಮಾಜದ ಹಿತದೃಷ್ಟಿಗಾಗಿ, ಜನರ ಆರೋಗ್ಯಕ್ಕಾಗಿ ತಮ್ಮ ಬದುಕನ್ನೇ ಸಮರ್ಪಿಸಿರುವ ಪೌರಕಾರ್ಮಿಕರು ನಿಜವಾದ ಕಾಯಕಯೋಗಿಗಳು ಎಂದು ಬಣ್ಣಿಸಿದರು.

2013-18ರ ಸಿದ್ದರಾಮಯ್ಯ ಸರ್ಕಾರದ ಅವಧಿ ಪೌರಕಾರ್ಮಿಕರ ಪಾಲಿಗೆ ಸುವರ್ಣಯುಗವಾಗಿತ್ತು. ಈಗಲೂ ಅಂತಹದ್ದೇ ನಿರ್ಧಾರ ಕೈಗೊಂಡಿದ್ದಾರೆ. ಜೊತೆಗೆ ಉಳಿದವರನ್ನು ಖಾಯಂ ಮಾಡಲು ನಾವೆಲ್ಲರೂ ಹೋಗಿ ಅವರಲ್ಲಿ ಕೋರುತ್ತೇವೆ ಎಂದು ತಿಳಿಸಿದರು.

ಪೌರಕಾರ್ಮಿಕರು ಬಸವಲಿಂಗಪ್ಪ, ಐಪಿಡಿ ಸಾಲಪ್ಪ ಅವರನ್ನು ಸದಾ ಸ್ಮರಿಸಬೇಕು. ಜೊತೆಗೆ ದೇವರಾಜ ಅರಸು, ಸಿದ್ದರಾಮಯ್ಯ ಅವರು ನಮಗಾಗಿ ಅನೇಕ ಯೋಜನೆಗಳನ್ನು ಜಾರಿಮಾಡಿದ್ದು, ಈ ವಿಷಯದಲ್ಲಿ ಕೃತಜ್ಞರಾಗಿರಬೇಕು ಎಂದರು.

ಪೌರಕಾರ್ಮಿಕರ ಎಲ್ಲ ಬೇಡಿಕೆಗಳನ್ನು ನಾವೆಲ್ಲರೂ ಸಿಎಂ ಸಿದ್ದರಾಮಯ್ಯ ಅವರ ಬಳಿಗೆ ಈಡೇರಿಸುವಂತೆ ಕೋರುತ್ತೇವೆ. ಅವರು ನಿಜಕ್ಕೂ ಸ್ಪಂದಿಸುತ್ತಾರೆ. ಆದರೆ, ಅದಕ್ಕೆ ತಕ್ಕಂತೆ ನೀವುಗಳು ಬದಲಾಗಬೇಕು. ಆರೋಗ್ಯದ ಕಡೆ ಗಮನಹರಿಸಬೇಕು. ಮಕ್ಕಳ ಶಿಕ್ಷಣ, ಮನೆ, ಕುಟುಂಬ ನಿರ್ವಹಣೆಗೆ ಆದ್ಯತೆ ನೀಡಬೇಕು. ಗಳಿಸಿದ ಹಣ ಕುಡಿತಕ್ಕೆ ವೆಚ್ಚ ಮಾಡದೇ ಉತ್ತಮ ಜೀವನ ನಡೆಸಲು ಮೀಸಲಿಡಬೇಕು ಎಂದು ತಿಳಿಸಿದರು.

ಯುಜಿಡಿ, ಕಸ ಸಂಗ್ರಹಣೆ ವಾಹನ ಚಾಲಕರು, ಕಸ ಎತ್ತುವವರು, ಕಸ ವಿಂಗಡಿಸುವವರನ್ನು ಪೌರಕಾರ್ಮಿಕರು ಎಂದು ಪರಿಗಣಿಸುವಂತೆ ಸರ್ಕಾರದ ಮೇಲೆ ಒತ್ತಡ ತರುತ್ತೇವೆ. ಜೊತೆಗೆ ಗೃಹಭಾಗ್ಯ ಯೋಜನೆಯಡಿ ಎಲ್ಲ ಪೌರಕಾರ್ಮಿಕರಿಗೆ ಮನೆ, ನಿವೇಶನ ಒದಗಿಸಲು ತಕ್ಷಣ ಸ್ಥಳೀಯ ಸಂಸ್ಥೆಗಳು ಕ್ರಮಕೈಗೊಳ್ಳಬೇಕು. ಇಲ್ಲದಿದ್ದರೇ ನಾನೇ ಸರ್ಕಾರಿ ಜಾಗಕ್ಕೆ ಪೌರಕಾರ್ಮಿಕರನ್ನು ಕರೆದುಕೊಂಡು ಹೋಗಿ ಗುರುತು ಹಾಕಿ ಹಂಚಿಕೆ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.ಪೌರಕಾರ್ಮಿಕ ಸಂಘದ ರಾಜ್ಯಾಧ್ಯಕ್ಷ, ಮೈಸೂರು ಮಾಜಿ ಮೇಯರ್ ನಾರಾಯಣ್ ಮಾತನಾಡಿ, ಗುಜರಾತ್ ರಾಜ್ಯದಲ್ಲೂ ಪೌರಕಾರ್ಮಿಕರ ನೇಮಕಾತಿ ಹೊರಗುತ್ತಿಗೆ ಪದ್ಧತಿಯಲ್ಲಿದೆ. ಆದರೆ, ರಾಜ್ಯದಲ್ಲಿ ಸಿದ್ದರಾಮಯ್ಯ ಅವರು ಅನಿಷ್ಠ ಪದ್ಧತಿ ರದ್ದುಮಾಡಿ, ನೇರ ವೇತನ ಪಾವತಿ ಜಾರಿಗೊಳಿಸಿದ್ದಾರೆ. ಜೊತೆಗೆ ಸಾವಿರಾರು ಮಂದಿಯನ್ನು ಖಾಯಂ ಗೊಳಿಸಿದ್ದಾರೆ. ಇನ್ನಷ್ಟು ಮಂದಿ ಉಳಿದಿದ್ದು, ಅವರನ್ನು ಖಾಯಂ ಮಾಡುವಂತೆ ಮನವಿ ಮಾಡಲಾಗಿದೆ ಎಂದರು.

ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಳ್ಳುವ ವಾಹನಗಳ ಚಾಲಕರು, ಸೇವಕರು, ಕಸ ವಿಂಗಡಿಸುವ ಮಂದಿಯನ್ನು ಖಾಯಂ ಮಾಡಬೇಕಾಗಿದೆ. ಗಟಾ□□ದಲ್ಲಿ ಇಳಿದು ಕೆಲಸ ಮಾಡುವ ಮಂದಿಯನ್ನು ಹೊರಗುತ್ತಿಗೆ ಪದ್ಧತಿಯಿಂದ ಬಿಡುಗಡೆಗೊಳಿಸಿ ನೇರ ನೇಮಕಾತಿಗೆ ಒಳಪಡಿಸಬೇಕು. ಈ ಸಂಬಂಧ ಶೀಘ್ರ ಮುಖ್ಯಮಂತ್ರಿ ಬಳಿಗೆ ಆಂಜನೇಯ, ನಾನು ಸೇರಿ ಸಂಘದ ಪದಾಧಿಕಾರಿಗಳ ನೇತೃತ್ವದ ನಿಯೋಗ ತೆರಳಿ ಮನವಿ ಮಾಡಲಾಗುದು ಎಂದು ತಿಳಿಸಿದರು.

ನಗರಸಭೆ ಮಾಜಿ ಅಧ್ಯಕ್ಷ ಬಿ.ಕಾಂತರಾಜ್ ಮಾತನಾಡಿ, ಪೌರಕಾರ್ಮಿಕರ ಕೆಲಸ ಯಾರೂ ಮಾಡುವುದಿಲ್ಲ. ಆದರೆ, ಅವರಿಗೆ ವೇತನ ಸೇರಿ ಅನೇಕ ಸೌಲಭ್ಯಗಳನ್ನು ಸರ್ಕಾರ ನೀಡಲು ಮೀನಾಮೇಷ ಎಣಿಸಬಾರದು. ಜೊತೆಗೆ ಅವರ ನೇಮಕಾತಿ ಸಂದರ್ಭದಲ್ಲಿಯೇ ನಿವೇಶನ, ಮನೆ ಸೌಲಭ್ಯ ಕೊಡಬೇಕು. ನಮ್ಮಗಳ ಆರೋಗ್ಯ ಕಾಪಾಡುವ ಜನರ ಬದುಕು ರಕ್ಷಿಸುವ ಕಾರ್ಯ ಸರ್ಕಾರದ್ದಾಗಿದೆ ಎಂದರು.

ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ರಾಜು ಮಾತನಾಡಿ, ಪೌರಕಾರ್ಮಿಕರ ಬದುಕು ಶೋಚನಿಯವಾಗಿದೆ. ಅದರೆ, ಸರ್ಕಾರ ಖಾಯಂ ಮಾಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದೆ ಎಂದು ಬೇಸರಿಸಿದರು.ವಯೋಮಿತಿ ಸಡಿಲಗೊಳಿಸಬೇಕು, ಗುತ್ತಿಗೆ ಪದ್ಧತಿ ರದ್ದಾಗಬೇಕು, ಆರೋಗ್ಯ ಸಂಜೀವಿನಿ ಸೌಲಭ್ಯ ಸಿಗಬೇಕು, ನೇರ ನೇಮಕಾತಿ ಪದ್ಧತಿ ಜಾರಿಗೊಳಿಸಬೇಕು. ಈ ನಿಟ್ಟಿನಲ್ಲಿ ಸಂಘದ ರಾಜ್ಯಾಧ್ಯಕ್ಷರು, ಮಾಜಿ ಸಚಿವರು ಸರ್ಕಾರದ ಮೇಲೆ ಒತ್ತಡ ತರಬೇಕು ಎಂದರು.ಪೌರಸೇವಾ ನೌಕರ ಸಂಘದ ಜಿಲ್ಲಾಧ್ಯಕ್ಷ ಡಿ.ದುರುಗೇಶಪ್ಪ, ನಗರಸಭೆ ಅಧ್ಯಕ್ಷೆ ಸುಮಿತಾ, ಆಯುಕ್ತೆ ರೇಣುಕಾ, ಮಾಜಿ ಅಧ್ಯಕ್ಷ ಗೊಪ್ಪೆ ಮಂಜುನಾಥ್, ಜಿಪಂ ಮಾಜಿ ಸದಸ್ಯ ಆರ್.ನರಸಿಂಹರಾಜು, ಜಗದೀಶ್, ಓಬಳೇಶ್, ಯತಿರಾಜ್, ದಾಸ್, ಗಂಗಾಧರ್, ಮಂಜುನಾಥ್ ನಾಯಕನಹಟ್ಟಿ, ಹರ್ಷದ್, ನಾಗಪ್ಪ ಹೊಸದುರ್ಗ, ಚಕ್ರವರ್ತಿ, ಶ್ರೀನಿವಾಸ್ ಇತರರಿದ್ದರು.

---

# ಹಸಿರು ಇದ್ದರೆ ಮಾತ್ರ ನಮ್ಮೆಲ್ಲರ ಉಸಿರು ಗಟ್ಟಿ

» ಚಳ್ಳಕೆರೆ



ಪ್ರಕೃತಿ ಸೌಂದರ್ಯವನ್ನು ಆರಾಧಿಸುವ ಷ್ಟೇಯಲ್ಲದೆ, ನೈಸರ್ಗಿಕ ಸಂಪತ್ತನ್ನು ಸಂರಕ್ಷಣೆ ಮಾಡುವ ನಿಟ್ಟಿನಲ್ಲಿ ನಾವೆಲ್ಲರೂ ಕಂಕಣಬದ್ದರಾಗಬೇಕು. ನಾಡಿನೆಲ್ಲೆಡೆ ಹಸಿರು ಇದ್ದರೆ ಮಾತ್ರ ನಮ್ಮೆಲ್ಲರ ಉಸಿರು ಭದ್ರ. ಆದ್ದರಿಂದ ಗಿಡಮರಗಳನ್ನು ನೆಟ್ಟು ಸಂರಕ್ಷಣೆ ಮಾಡುವ ಸಂಕಲ್ಪ ಮಾಡೋಣವೆಂದು ಹಿರಿಯ ನ್ಯಾಯಾಧೀಶ ಸಮೀರ್ ಪಿ.ನಂದ್ಯಾಲ್ ತಿಳಿಸಿದರು.

ನ್ಯಾಯಾಲಯದ ಆವರಣದಲ್ಲಿ ವಿಶ್ವಪರಿಸರ ದಿನಾಚರಣೆ ಅಂಗವಾಗಿ ತಾಲ್ಲೂಕು ವಕೀಲರ ಸಂಘದ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಗಿಡನೆಟ್ಟು ನೀರುಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಪ್ರಕೃತಿ ಸಂಪತ್ತು ಸಂರಕ್ಷಣೆ ಬಗ್ಗೆ ಅರಣ್ಯ ಇಲಾಖೆ ಅನೇಕ ಜಾಗೃತಿ ಕಾರ್ಯಕ್ರಮಗಳನ್ನು ಮೂಡಿಸುತ್ತಿದ್ದರೂ ಸಹ ಮರಗಿಡಗಳನ್ನು ಕತ್ತರಿಸುವ ಪ್ರಕೃತಿ ಹೆಚ್ಚಾಗುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿದರು.

ಜೆಎಂಎಫ್‌ಸಿ ನ್ಯಾಯಾಧೀಶೆ ಎಚ್.ಆರ್. ಹೇಮಾ ಮಾತನಾಡಿ, ನಮ್ಮಲ್ಲಿ ವಿಶಾಲವಾದ ಭೂಮಿ ಇದ್ದರೂ ಮರಗಿಡಗಳನ್ನು ಬೆಳೆಸಿ ಪೋಷಿಸುವ ವಿಶಾಲವಾದ ಮನಸ್ಸು ಇಲ್ಲ. ಇದರಿಂದ ಪ್ರಕೃತಿದತ್ತವಾದ ಸಂಪತ್ತು ರಕ್ಷಣೆ ಮಾಡಲು ಸಾಧ್ಯವಾಗಿಲ್ಲ. ಅಭಿವೃದ್ದಿಯ ಹೆಸರಿನಲ್ಲಿ ಮರಗಳನ್ನು ಕತ್ತರಿಸುವ ಪ್ರವೃತ್ತಿ ಹೆಚ್ಚುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಅಪರ ಸಿವಿಲ್‌ನ್ಯಾಯಾಧೀಶ ಬಿ.ಆರ್.ಪುನೀತ್ ಮಾತನಾಡಿ, ವಿಶ್ವಪರಿಸರ ದಿನಾಚರಣೆ ನಮ್ಮೆಲ್ಲರಿಗೂ ವಿಶೇಷವಾಗಿದೆ. ಪ್ರತಿನಿತ್ಯವೂ ನಾವು ಉಸಿರಾಡಿ ಬದುಕುವುದು ನೈಸರ್ಗಿಕವಾಗಿ ದೊರೆಯುವ ಆಮ್ಲಜನಕದಿಂದ. ಆದರೆ, ಮನುಷ್ಯ ಯಾವುದನ್ನೂ ಲೆಕ್ಕಿಸದೆ ನಿದ್ರಾಕ್ಷಣ್ಯವಾಗಿ ಕಾನೂನು ಪರಿಮಿತಿ ಮೀರಿ ಮರಕಡಿಯುತ್ತಿದ್ದಾರೆ. ಇಂತಹ ಪ್ರಕರಣಗಳ ತಡೆಗೆ ತಾಲ್ಲೂಕು ಆಡಳಿತ ಗಂಭೀರ ಚಿಂತನೆ ನಡೆಸಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ವಹಿಸಿದ್ದರು. ಉಪಾಧ್ಯಕ್ಷ ಬಿ.ಪಾಲಯ್ಯ, ಕಾರ್ಯದರ್ಶಿ ಸಿದ್ದರಾಜು, ಅರಣ್ಯಾಧಿಕಾರಿ ರಾಜೇಶ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

---

# ಕಸ್ತೂರಬಾ ಗಾಂಧಿ ಬಾಲಕಿಯರ ವಸತಿ ಶಾಲೆಗೆ ಮಕ್ಕಳ ಹಕ್ಕು ರಕ್ಷಣಾ ಆಯೋಗದ ಸದಸ್ಯ ತಿಪ್ಪೇಸ್ವಾಮಿ ಭೇಟಿ



» ಚಳ್ಳಕೆರೆ

ಶಾಲೆಯಲ್ಲಿ ವಿದ್ಯಾರ್ಥಿಗಳು ವಿನಯದಿಂದ ವಿದ್ಯೆಕಲಿತರೆ ಮಾತ್ರ ಭವಿಷ್ಯದ ಅವರ ಬದುಕು ಉತ್ತಮವಾಗುತ್ತದೆ. ಶಿಕ್ಷಕರು ಸಹ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ದಿಯ ಬಗ್ಗೆ ಹೆಚ್ಚು ಜಾಗೃತಿಯಿಂದ ಕಾರ್ಯನಿರ್ವಹಿಸಬೇಕಾಗುತ್ತದೆ. ಪ್ರತಿಯೊಬ್ಬ ವಿದ್ಯಾರ್ಥಿಯ ಕಲಿಕೆಯ ಆಸಕ್ತಿಯನ್ನು ಗಮನಿಸಿ ಮಾರ್ಗದರ್ಶನ ನೀಡಬೇಕೆಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಕೆ.ಟಿ.ತಿಪ್ಪೇಸ್ವಾಮಿ ತಿಳಿಸಿದರು. ಅವರು, ನಗರದ ಕಸ್ತೂರಬಾ ಗಾಂಧಿ ಬಾಲಕಿಯರ ವಸತಿ ಶಾಲೆಗೆ ಭೇಟಿ ನೀಡಿ ಅಲ್ಲಿನ ವಿದ್ಯಾರ್ಥಿನಿಯರೊಂದಿಗೆ ಕಲಿಕೆಯ ಬಗ್ಗೆ ಪ್ರಶ್ನಿಸಿ, ಪ್ರತಿನಿತ್ಯ ಶಾಲೆಯಲ್ಲಿ ಯಾವ ವಿಷಯದ ಬಗ್ಗೆ ಶಿಕ್ಷಕರು ಮಾರ್ಗದರ್ಶನ ನೀಡುತ್ತಾರೆ. ಶಿಕ್ಷಕರು ಹೇಳುವ ಪಾಠ ಅರ್ಥಮಾಡಿಕೊಳ್ಳುವ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಹೆಚ್ಚು ಗಮನಹರಿಸಬೇಕೆಂದರು.ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾತನಾಡಿ, ಕಳೆದ ಸುಮಾರು 10 ವರ್ಷಗಳಿಂದ ಕಸ್ತೂರಿಬಾವಸತಿಶಾಲೆ ಕಾರ್ಯನಿರ್ವಹಿಸುತ್ತಿದೆ. ಶಿಕ್ಷಣವನ್ನು ಕಲಿಯುವಲ್ಲಿ ನಿರಾಸಕ್ತಿ ತೋರುವ ಬಾಲಕಿಯರನ್ನು ಹುಡುಕಿತಂದು ಶಾಲೆಗೆ ದಾಖಲು ಮಾಡಿಕೊಳ್ಳಲಾಗುತ್ತದೆ. ಪ್ರತಿಯೊಬ್ಬ ವಿದ್ಯಾರ್ಥಿನಿಯ ಶೈಕ್ಷಣಿಕ ಪ್ರಗತಿಯ ಬಗ್ಗೆ ಶಿಕ್ಷಕರು ನಿರಂತರ ಗಮನಹರಿಸುತ್ತಾರೆಂದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಸಿಡಿಪಿಒ ರಾಜಾನಾಯ್ಕ, ಮುಖ್ಯ ಶಿಕ್ಷಕಿ ಚಾರುಮತಿ ಉಪಸ್ಥಿತರಿದ್ದರು.

---

## ಅರ್ಜಿ ಆಹ್ವಾನ

ದಾವಣಗೆರೆ: ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿಗೆ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ವೆಬ್‌ಸೈಟ್ http://sevasindhu.karnataka.gov.in ಗ್ರಾಮಒನ್, ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ-2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದ ಅರ್ಜಿದಾರರು www.kaushalkar.com ಜೂನ್ 30 ರೊಳಗಾಗಿ ಸಲ್ಲಿಸಬಹುದು.

---

ಪ್ರಮುಖ ಸುದ್ದಿ

## ಲಾರ್ವಾ ಮುಕ್ತ ಶಾಲೆ ಕಾರ್ಯಕ್ರಮದಲ್ಲಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ

# ಡೆಂಗಿ ರೋಗ ಹರಡದಂತೆ ಎಚ್ಚರಿಕೆ ವಹಿಸಿ: ಗೌರಮ್ಮ

» ಚಿತ್ರದುರ್ಗ



ಮಳೆಗಾಲದಲ್ಲಿ ನಿಂತ ನೀರಿನ ತಾಣಗಳಲ್ಲಿ ಲಾರ್ವ ಸೊಳ್ಳೆಗಳು ಹೆಚ್ಚಾಗಿರುವುದು ಹಾಗೂ ಇದರಿಂದ ವಿವಿಧ ಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತದೆ ಎಂದು ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ ಹೇಳಿದರು.

ನಗರದ ಪ್ರಗತಿ ವಿದ್ಯಾ ಮಂದಿರ ಶಾಲೆಯಲ್ಲಿ ಸೊಳ್ಳೆ, ಲಾರ್ವ ಮುಕ್ತ ಶಾಲೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಮಾನ್ಸೂನ್ ಕಾಲದಲ್ಲಿ ಡೆಂಗ್ಯೂ, ಚಿಕನ್ ಗುನಿಯಾ, ಮಲೇರಿಯಾ ಇನ್ನಿತರ ಕಾಯಿಲೆಗಳಿಗೆ ಸೊಳ್ಳೆಗಳ ಕಡಿತ ಕಾರಣವಾಗುತ್ತದೆ. ಮುಖ್ಯವಾಗಿ ಈಡಿಸ್ ಸೊಳ್ಳೆಗಳು ಸ್ವಚ್ಛ ನಿಂತ ನೀರಿನಲ್ಲಿ ಉತ್ಪತ್ತಿಯಾಗುತ್ತವೆ. ಹಗಲು ಹೊತ್ತಿನಲ್ಲಿ ಮನುಷ್ಯರನ್ನು ಕಚ್ಚುವುದರಿಂದ ಡೆಂಗಿ ಮತ್ತು ಚಿಕನ್ ಗುನ್ಯಾ ರೋಗಗಳು ಸುಲಭವಾಗಿ ಹರಡುತ್ತವೆ. ಈ ರೋಗವು ಹರಡದಂತೆ ಎಚ್ಚರಿಕೆ ವಹಿಸುವುದು ನಮ್ಮೆಲ್ಲರ ಜವಾಬ್ದಾರಿ. ಮುಂಜಾಗ್ರತಾ ಕ್ರಮಗಳನ್ನು ಪ್ರತಿಯೊಂದು ಮನೆಯಲ್ಲಿಯೂ ಅನುಸರಿಸಬೇಕು ಎಂದು ಹೇಳಿದರು.

ನೀರಿನ ತೊಟ್ಟಿಗಳು ಡ್ರಮ್ ಬ್ಯಾರೆಲ್ ಮತ್ತು ಟ್ಯಾಂಕ್‌ಗಳನ್ನು ಭದ್ರವಾಗಿ ಮುಚ್ಚಿಡಿ. ಮನೆಯ ಮೇಲೆ ಮತ್ತು ಸುತ್ತಮುತ್ತಲಿನ ಮಳೆಯ ನೀರು ಸಂಗ್ರಹವಾಗದಂತೆ ಪ್ಲಾಸ್ಟಿಕ್ ವಸ್ತುಗಳು ಟೈರ್‌ಗಳು ಒಡೆದ ತೆಂಗಿನ ಚಿಪ್ಪು ಇತ್ಯಾದಿಗಳನ್ನು ತಕ್ಷಣ ವಿಲೇವಾರಿ ಮಾಡಿ ಏರ್ ಕೂಲರ್ ಹೂವಿನ ಕುಂಡ ಫೈರ್ ಬಕೆಟ್ ಇತ್ಯಾದಿಗಳ ನೀರನ್ನು ಪ್ರತಿ ವಾರ ಖಾಲಿ ಮಾಡುವುದು ಕಡ್ಡಾಯ ಮಾಡಿಕೊಳ್ಳಿ. ಹಗಲಿನಲ್ಲಿ ನಿದ್ದೆ ಮಾಡುವ ಅಥವಾ ವಿಶ್ರಾಂತಿ ಪಡೆಯುವವರು ಸೊಳ್ಳೆ ನಿರೋಧಕ ಹಾಗೂ ಸೊಳ್ಳೆ ಪರದೆಯನ್ನು ತಪ್ಪದೆ ಬಳಸಿ. ಮನೆಯ ಸುತ್ತಮುತ್ತ ಚೆಂಡು ಹೂವು, ತುಳಸಿ ಗಿಡ ಬೆಳಸಿ ಸೊಳ್ಳೆಗಳಿಂದ ರಕ್ಷಣೆ ಪಡೆಯಿರಿ ಎಂದು ಉಪ ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿಗಳು ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಾನಕಿ ಮಾತನಾಡಿ, ಶಾಲೆಯ ಸುತ್ತಮುತ್ತ ಸ್ವಚ್ಛತೆಯನ್ನ ಕಾಪಾಡುವಲ್ಲಿ ಎಲ್ಲರ ಪಾತ್ರ ಬಹಳ ಮುಖ್ಯವಾದದ್ದು ಸೊಳ್ಳೆಗಳ ನಿಯಂತ್ರಣ ನಮ್ಮೆಲ್ಲರ ಜವಾಬ್ದಾರಿ ಎಂದು ತಿಳಿಸಿದರು. ಹಾಗೂ ಮಕ್ಕಳು ಶಾಲೆಗೆ ಬರುವಾಗ ಕೈಕಾಲುಗಳಿಗೆ ಕೊಬ್ಬರಿ ಎಣ್ಣೆ ಮತ್ತುಬೇವಿನ ಎಣ್ಣೆಯ ಮಿಶ್ರಣ ಮಾಡಿ ಹಚ್ಚಿಕೊಂಡು ಬರಬೇಕು ಹಾಗೂ ಮೈತುಂಬ ಬಟ್ಟೆಯನ್ನು ಧರಿಸಬೇಕು ಯಾವುದೇ ಜ್ವರ ಇದ್ದಲ್ಲಿ ತಕ್ಷಣ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ರಕ್ತ ಪರೀಕ್ಷೆಯನ್ನು ಮಾಡಿಸಿ ಹಾಗೂ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೀರಿನಲ್ಲಿ ಲಾರ್ವ ಹುಳುಗಳು ಬೆಳೆಯದಂತೆ ಎಚ್ಚರವಹಿಸಿ ಡೆಂಗಿ ಜ್ವರದಿಂದ ಪಾರಾಗಿ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ವಸಂತ ಲಕ್ಷ್ಮಿ, ಸಹ ಶಿಕ್ಷಕರಾದ ರಜಿಯಾ, ಸಬ್ರಿನ್ ಹಾಗೂ ಆಶಾ ಕಾರ್ಯಕರ್ತೆಯರಾದ ನಮ್ರತಾ ಮತ್ತು ಶಬೀನ ಹಾಜರಿದ್ದರು.

# ಪಡಿತರ ವಿತರಕರ ಸಹಾಯಧನ ಬಿಡುಗಡೆಗೆ ಆಗ್ರಹ

» **ಚಿತ್ರದುರ್ಗ**

ರಾಜ್ಯದ ಪಡಿತರ ವಿತರಕರಿಗೆ 2025 ಮಾರ್ಚ್ ಏಪ್ರಿಲ್ ಮತ್ತು ಮೇ ಮಾಹೆಯ ಅನ್ನಭಾಗ್ಯದ ಸಹಾಯಧನ ಅಥವಾ ಲಾಭಾಂಶ ಬಿಡುಗಡೆಗೊಳಿಸಬೇಕು, ಆರು ವರ್ಷಗಳಿಂದ ಈಕೆವೈಸಿ ಕೆಲಸ ನಿರ್ವಹಿಸಿರುವ ಹಣವನ್ನು ಅತಿ ಜರೂರಾಗಿ ಬಿಡುಗಡೆಗೊಳಿಸಬೇಕು ಸೇರಿದಂತೆ ಇತರೆ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರವನ್ನು ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಕರ ಕ್ಷೇಮಾಭೀವೃದ್ದಿ ಸಂಘ ಆಗ್ರಹಿಸಿದೆ.

ಚಿತ್ರದುಗರ್ಹ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷರಾದ ಕೃಷ್ಣ ಡಿ. ನಾಯ್ಕ್, ಕರ್ನಾಟಕ ರಾಜ್ಯದಲ್ಲಿ ಸುಮಾರು 45 ವರ್ಷಗಳಿಂದ. ಆಹಾರ ಇಲಾಖೆಯಲ್ಲಿ ಸುಮಾರು ವಿತರಕರು. ಕೆಲಸ ನಿರ್ವಹಿಸಿರುತ್ತಾರೆ. ರಾಜ್ಯದಲ್ಲಿ ಪ್ರಸ್ತುತ 20488 ಪಡಿತರ ವಿತರಕರು ಸರ್ಕಾರದ ಅಧೀನದಲ್ಲಿ ಸರ್ಕಾರ ರೂಪಿಸುವ ಯೋಜನೆಗಳಿಗೆ ಅನುಗುಣವಾಗಿ ಕೆಲಸ ನಿರ್ವಹಿಸಿ ಯೋಜನೆಗಳು ಯಶಸ್ವಿಗೆ ರಾಜ ರಾಜ್ಯದ ಪಡಿತರ ವಿತರಕರು ಮುಖ್ಯ ಕಾರಣಕರ್ತರಾಗಿದ್ದಾರೆ ರಾಜ್ಯದಲ್ಲಿ ಸುಮಾರು 6 ವರ್ಷಗಳ ಹಿಂದೆ ಸರ್ಕಾರ ರಾಜ್ಯದ ಪಡಿತರ ಚೀಟಿದಾರರ ಎಲ್ಲಾ ಸದಸ್ಯರ ಬೆರಳಚ್ಚು ಪಡೆಯುವ ಮುಖಾಂತರ ದೃಢೀಕರಣ ಮಾಡಬೇಕೆಂದು ಆದೇಶ ಮಾಡಿತು. ಅದರಂತೆ ರಾಜ್ಯದ ಎಲ್ಲಾ ಪಡಿತರ ವಿತರಕರು ರಾಜ್ಯದ ಪಡಿತರ ಚೀಟಿದಾರರ ಎಲ್ಲಾ ಸದಸ್ಯರ ಈಕೆವೈಸಿ ಮಾಡಿ ಮುಗಿಸಿರುತ್ತೇವೆ. ಆದರೆ ಇದುವರೆಗೂ ನಮಗೆ ಬರಬೇಕಾಗಿರುವ ಈಕೆವೈಸಿ ಹಣ ಸರ್ಕಾರ ಬಿಡುಗಡೆ ಮಾಡಿರುವುದಿಲ್ಲ ಎಂದು ದೂರಿದ್ದಾರೆ.




ರಾಜ್ಯದ ಪಡಿತರ ವಿತರಕರಿಗೆ ಪ್ರತಿ ತಿಂಗಳು ಸರ್ಕಾರದಿಂದ ಬರುವ ಸಹಾಯಧನ ಅಥವಾ ಲಾಭಾಂಶ ನೀಡದೇ ಇರುವುದರಿಂದ ಪಡಿತರ ವಿತರಕರ ಜೀವನ ಬಹಳ ಕಷ್ಟಕರವಾಗಿದೆ. ರಾಜ್ಯದ ಪಡಿತರ ವಿತರಕರಿಗೆ 2025 ಮಾರ್ಚ್ ಮಾಹೆಯ ಅನ್ನಭಾಗ್ಯದ ಸಹಾಯಧನ ಅಥವಾ ಲಾಭಾಂಶ ಬಿಡುಗಡೆಗೊಳಿಸಬೇಕು. ಹಾಗೂ ಏಪ್ರಿಲ್ ಮತ್ತು ಮೇ ಮಾಹೆಯ ಸಹಾಯಧನ ಅಥವಾ ಲಾಭಾಂಶ ಬಿಡುಗಡೆಗೊಳಿಸಬೇಕು. ಸರ್ಕಾರದಿಂದ ಪಡಿತರ ವಿತರಕರಿಗೆ ಪ್ರಿಂಟರ್ ಮತ್ತುಡಿಹೊರಿಸ್ ಉಪಕರಣವನ್ನು ನೀಡಬೇಕು. ಆರು ವರ್ಷಗಳಿಂದ ಈಕೆವೈಸಿ ಕೆಲಸ ನಿರ್ವಹಿಸಿರುವ ಹಣವನ್ನು ಅತಿ ಜರೂರಾಗಿ ಬಿಡುಗಡೆಗೊಳಿಸಬೇಕು. ಪಡಿತರ ಚೀಟಿದಾರರಿಗೆ 10 ಕೆಜಿ ಅಕ್ಕಿ ಜೊತೆಗೆ ಬೇಳೆ, ಸಕ್ಕರೆ, ಅಡುಗೆ ಎಣ್ಣೆ, ಉಪ್ಪು ಇತ್ಯಾದಿ ಪದಾರ್ಥಗಳು ವಿತರಿಸಬೇಕು. ಪ್ರತಿ ತಿಂಗಳು ನಮ್ಮ ವಿತರಕರಿಗೆ ಸಹಾಯಧನ ಅಥವಾ ಲಾಭಾಂಶ ಬರುವಂತೆ ಆದೇಶಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಸರ್ಕಾರ ಈಗ ನಮಗೆ ಬರೀ 150 ರೂಗಳ ಕಮಿಷನ್ ನೀಡುತ್ತಿದೆ ಇದರಿಂದ ನಮ್ಮ ಕೆಲಸಗಳಿಗೆ ಸಾಕಾಗುವುದಿಲ್ಲ ಇದರ ಬದಲಿಗೆ 250 ರೂ.ಗಳನ್ನು ನೀಡಬೇಕು, ಇದರಿಂದ ನಮ್ಮ ಮೇಲೆ ಬೀಳುವ ಹೊರೆ ಕಡಿಮೆಯಾಗುತ್ತದೆ. ಸರ್ಕಾರ ನಮಗೆ ವಿವಿಧ ರೀತಿಯ ಯಂತ್ರಗಳನ್ನು ಖರೀದಿ ಮಾಡುವಂತೆ ಸೂಚನೆ ನೀಡಿದೆ ಆದರೆ ಈ ಯಂತ್ರಗಳನ್ನು ಖರೀದಿ ಮಾಡಲು ನಮ್ಮಲ್ಲಿ ಹಣದ ಕೊರತೆ ಇದೆ ಇದರಿಂದ ಸರ್ಕಾರವೇ ಈ ಯಂತ್ರಗಳನ್ನು ಖರೀದಿ ಮಾಡಿ ನೀಡಬೇಕು, ಸರ್ಕಾರ ಅರ್ಹರಿಗೆ ಸರಿಯಾದ ರೀತಿಯಲ್ಲಿ ಪಡಿತರ ವಿತರಣೆಯಾಗಬೇಕೆಂದು ಬಯಸಿದೆ ಇದರಲ್ಲಿ ಅನರ್ಹರು ಸೇರಿಕೊಂಡು ಸರ್ಕಾರದ ಪಡಿತರವನ್ನು ಹಾಳು ಮಾಡುತ್ತಿದ್ದಾರೆ ಇಲಾಖವತಿಯಿಂದ ಅನರ್ಹರ ಕಾರ್ಡಗಳನ್ನು ಪತ್ತೇ ಮಾಡುವ ಕಾರ್ಯ ಪ್ರಗತಿಯಲ್ಲಿದೆ ಇದಕ್ಕೆ ನಾವು ಸಹಾ ಬೆಂಬಲವನ್ನು ನೀಡುತ್ತೇವೆ ಎಂದರು. ಸರ್ಕಾರ ಹೊಸದಾಗಿ ಪಡಿತರ ಅಂಗಡಿಗಳನ್ನು ತೆರೆಯಲು ಅನುಮತಿಯನ್ನು ನೀಡುತ್ತಿದೆ ಇದರಿಂದ ನಮಗೆ ತೊಂದರೆಯಾಗುತ್ತದೆ ಈಗ ಇದರಿಂದ ಬರುವ ಲಾಭಾಂಶ ಕಡಿಮೆಯಾಗುತ್ತಿದೆ ಇನ್ನೂ ಹೊಸದಾಗಿ ಅಂಗಡಿಗಳನ್ನು ತರೆಯಲು ಅನುಮತಿ ನೀಡಿದರೆ ನಮಗೆ ಮತ್ತಷ್ಟು ನಷ್ಠವಾಗುತ್ತದೆ ಇದೆ ಬದಲು ಇರುವ ಪಡಿತರ ಅಂಗಡಿಗಳಿಗೆ ಮತ್ತಷ್ಟು ಬೇರೆ ಕಾರ್ಡಗಳನ್ನು ನೀಡುವುದರ ಮೂಲಕ ನಮ್ಮ ಜೀವನಕ್ಕೆ ದಾರಿಯನ್ನು ಕಲ್ಪಿಸಬೇಕಿದೆ ಎಂದ ಅವರು, ನಮಗೆ ಯಾವುದೇ ರೀತಿಯ ಭದ್ರತೆ ಇಲ್ಲವಾಗಿದೆ. ನಮ್ಮ ಕೆಲಸವನ್ನು ಮಾಡುವವರು ಆಕಸ್ಮಿಕವಾಗಿ ನಿಧನ ಹೊಂದಿದರೆ ಅವರ ಅವಲಂಬಿತರಿಗೆ ಪಡಿತರ ಅಂಗಡಿಯನ್ನು ನೀಡುತ್ತಿಲ್ಲ ಇದರಿಂದ ಇದನ್ನು ನಂಬಿದವರಿಗೆ ಅನ್ಯಾಯವಾಗುತ್ತಿದೆ ಎಂದು ತಿಳಿಸಿದರು.

ಗೋಷ್ಟಿಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ಪಡಿತರ ವಿತರಕರ ಕ್ಷೇಮಾಭೀವೃದ್ದಿ ಸಂಘದ ಗೌಅಧ್ಯಕ್ಷರಾದ ಡಿ.ಎಂ.ಹಾಲಸ್ವಾಮಿ, ಹಿರಿಯ ಉಪಾಧ್ಯಕ್ಷರಾದ ಕೆ.ಎಸ್.ಪ್ರಕಾಶ್, ಕೋಶಾಧ್ಯಕ್ಷರಾದ ಡಿ.ಜಿ.ಶಿವಾನಂದಪ್ಪ, ಪ್ರಧಾನ ಕಾರ್ಯದರ್ಶಿ ಎಂ.ಎಕೆ. ರಾಮಚಂದ್ರ, ಸಹ ಕಾರ್ಯದರ್ಶಿ ಶ್ರೀಮತಿ ರೇಣುಕಮ್ಮ, ಜಿಲ್ಲಾ ಅಧ್ಯಕ್ಷರು ಕೆ.ಎಸ್.ಸಿದ್ದಬಸಪ್ಪ, ನಗರ ಘಟಕ ಅಧ್ಯಕ್ಷರು ಭಿಮಪ್ಪ, ತಾಲ್ಲೂಕು ಅಧ್ಯಕ್ಷ ಹನುಮಂತಪ್ಪ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಕಾಡುಗೊಲ್ಲ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಆಗೆ ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮ ನಿಯಮಿತದಿಂದ 2025-26ನೇ ಸಾಲಿಗೆ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ. ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಗಳಾಗಿದ್ದು, ಕಾಡುಗೊಲ್ಲ ಜಾತಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ನಿಗಮದ ಅಥವಾ ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು. ಅರಿವು ಯೋಜನೆಯಡಿ ಅಭ್ಯರ್ಥಿಯ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು, ವಾರ್ಷಿಕ ವರಮಾನ ರೂ.3.50 ಲಕ್ಷದ ಒಳಗಿರಬೇಕು. ಸ್ವಾವಲಂಬಿ ಸಾರಥಿ ಯೋಜನೆಯಡಿ ವಯೋಮಿತಿ21 ವರ್ಷಗಳಿಂದ 45 ವರ್ಷಗಳ ಮಿತಿಯಲ್ಲಿರಬೇಕು. ವಿದೇಶಿ ವ್ಯಾಸಂಗ ಸಾಲ ಯೋಜನೆಯಡಿ ಸಾಲ ಸೌಲಭ್ಯ ಪಡೆಯಲು ವಾರ್ಷಿಕ ವರಮಾನವು ರೂ 8.00 ಲಕ್ಷಗಳ ಮಿತಿಯಲ್ಲಿ ಇರಬೇಕು. ಸ್ನಾತಕೊತ್ತರ ಪದವೀಧರರಿಗೆ ವಿದ್ಯಾರ್ಥಿಯ ವಯಸ್ಸು 25 ಮತ್ತು ಪಿ.ಹೆಚ್.ಡಿ ಪಧವೀಧವಿದರರಿಗೆ 27 ವರ್ಷಗಳ ವಯೋಮಿತಿಯನ್ನು ನಿಗಧಿಪಡಿಸಲಾಗಿದೆ. ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆಯನ್ನು ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ.98,000/- ಮತ್ತು ನಗರ ಪ್ರದೇಶದವರಿಗೆ ರೂ.1,20,000/-ಗಳ ಮಿತಿಯೊಳಗಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ 33%, ವಿಕಲಚೇತನರಿಗೆ 5%,ತೃತೀಯ ಲಿಂಗಿಗಳಿಗೆ ಶೇ1% ಮೀಸಲಾತಿ ನಿಗದಿ ಮಾಡಲಾಗಿದೆ. ಯೋಜನೆಗಳಡಿ ಸಹಾಯಧನ/ಸಾಲ-ಸೌಲಭ್ಯವನ್ನು ಪಡೆಯಲು ಇಚ್ಚಿಸುವವರ ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಗಳಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಜುಲೈ 2 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. ಅರಿವು ಶೈಕ್ಷಣಿಕ ಸಾಲ ಯೋಜನೆಗಳಿಗೆ ಯಾವುದೇ ಕೊನೆಯ ದಿನಾಂಕ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ಕೇಂದ್ರ ಕಛೇರಿ ದೂರವಾಣಿ ಸಂಖ್ಯೆ 080-22374848, 7899899039 ಕರೆ ಮಾಡಬಹುದು. ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಮಗದ ಕಛೇರಿಗಳಲ್ಲಿ ಪೂರ್ವಾಹ್ನ10.00ರಿಂದ ಸಂಜೆ5.30ರವರೆಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ವ್ಯವಸ್ಥಾಪಕಿ ಹೆಚ್.ಶಿಲ್ಪಾ ತಿಳಿಸಿದ್ದಾರೆ.

### ಅರ್ಚಕರಿಗೆ ಮಾಸಿಕ ಗೌರವಧನಕ್ಕೆ ಅರ್ಜಿ

» **ದಾವಣಗೆರೆ**


ಜೈನ್‌ಸಮುದಾಯಬಸದಿಗಳಲ್ಲಿಸೇವೆಸಲ್ಲಿಸುತ್ತಿರುವ ಪ್ರಧಾನ ಮತ್ತು ಸಹಾಯಕ ಅರ್ಚಕರುಗಳಿಗೆ ಹಾಗೂ ಸಿಖ್ ಗುರುದ್ವಾರಗಳಲ್ಲಿರುವ ಮುಖ್ಯ ಮತ್ತು ಸಹಾಯಕ ಗ್ರಂಥಿಗಳಿಗೆ ಮಾಸಿಕ ಗೌರವಧನ ಪಡೆಯಲಿಚ್ಚಿಸುವ ಅರ್ಹ ಫಲಾನುಭವಿಗಳಿಂದ ನಿಗಧಿತ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 26 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಫಲಾನುಭವಿಗಳು ಜಿಲ್ಲೆಯ ಜೈನ್ ಬಸದಿಗಳಲ್ಲಿ ಕಾರ್ಯನಿರ್ವಹಿಸುವವರಿಗೆ ಸಂಘಗಳ ನೊಂದಣಿ ಕಾಯ್ದೆ ಅಥವಾ ಇತರೆ ಸಂಬಂಧಪಟ್ಟ ಕಾಯ್ದೆ ಅನ್ವಯ ನೊಂದಣಿಯಾದ ಪ್ರಧಾನ ಅರ್ಚಕ, ಗ್ರಂಥಿಗೆ ಮಾಸಿಕ ರೂ.6000/, ಸಹಾಯಕ ಗ್ರಂಥಿ, ಅರ್ಚಕರಿಗೆ ಮಾಸಿಕ ರೂ.5000/ಗೌರವಧನ ನೀಡಲಾಗುವುದು. ಅರ್ಹ ಫಲಾನುಭವಿಗಳು ನಿಗದಿತ ಅರ್ಜಿಯೊಂದಿಗೆ ಅರ್ಚಕ, ಗ್ರಂಥಿಗಳ ಭಾವಚಿತ್ರ, ಬ್ಯಾಂಕ್ ಖಾತೆ ಮತ್ತು ಆಧಾರ್ ಪ್ರತಿ, ಹುದ್ದೆಗೆ ಸಂಬಂಧಪಟ್ಟ ಧಾರ್ಮಿಕ ವಿದ್ಯಾರ್ಹತೆ ಕುರಿತು ದಾಖಲೆ, ಕಳೆದ ಮೂರು ವರ್ಷಗಳಲ್ಲಿ ವಾಸವಿರುವ ಬಗ್ಗೆ ಸ್ಥಳೀಯ ತಹಶೀಲ್ದಾರ್ ಅವರಿಂದ ವಾಸಸ್ಥಳ ದೃಢೀಕರಣ ಹಾಗೂ ಸಂಸ್ಥೆಯವರು ಅರ್ಚಕರ ಮಾಹೆವಾರು ಕರ್ತವ್ಯದ ಹಾಜರಾತಿ, ಸೇವಾ ಪ್ರಮಾಣ ಪತ್ರ ನಿಗದಿತ ನಮೂನೆಯಲ್ಲಿ ಜಿಲ್ಲಾಡಳಿತ ಭವನದಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಸರ್ಕಾರಿ ಕಾಲೇಜಿನಲ್ಲಿ ವಿವಿಧ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಾ.ಎಂ.ಚಂದ್ರಪ್ಪ

» **ಹೊಳಲ್ಕೆರೆ**

ಶಿಕ್ಷಣದ ಜೊತೆ ಸಂಸ್ಕಾರವಂತರಾಗಿ ಗುರು-ಹಿರಿಯರು, ಪೋಷಕರುಗಳಿಗೆ ಗೌರವ ತರುವ ರೀತಿಯಲ್ಲಿ ಬೆಳೆಯಬೇಕೆಂದು ಶಾಸಕ ಡಾ.ಎಂ. ಚಂದ್ರಪ್ಪ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2024-25 ನೇ ಸಾಲಿನ ಐ.ಕ್ಯು.ಎ.ಸಿ. ಅಡಿಯಲ್ಲಿ ಸಾಂಸ್ಕೃತಿಕ, ಕ್ರೀಡಾ, ರಾಷ್ಟ್ರೀಯ ಸೇವಾ ಯೋಜನೆ, ರೆಡ್‌ಕ್ರಾಸ್ ಹಾಗೂ ರೇಂಜರ್ಸ್ ಚಟುವಟಿಕೆಗಳ ಸಮಾರೋಪ ಸಮಾರಂಭ ಹಾಗೂ ಪ್ರತಿಭಾ ಪುರಸ್ಕಾರ, ಹಳೆ ವಿದ್ಯಾರ್ಥಿಗಳ ಸ್ನೇಹ ಸಂಗಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಲಿ ಎನ್ನುವ ಉದ್ದೇಶದಿಂದ ನುರಿತ ಬೋಧಕರುಗಳನ್ನು ನೇಮಿಸಿದ್ದೇವೆ. ಗ್ರಂಥಾಲಯ ಕಟ್ಟಲು ಒಂದು ಕೋಟಿ ರೂ.ಮಂಜೂರು ಮಾಡಿದ್ದೇನೆ. ಸ್ನಾತಕೋತ್ತರ ಕೇಂದ್ರ ಕಟ್ಟಲು ಈಗಲೇ ನಾಲ್ಕು ಕೋಟಿ ರೂ.ಗಳನ್ನು ಮಂಜೂರು ಮಾಡುತ್ತಿದ್ದೇನೆಂದು ಹೇಳಿದರು.

ಹೆಣ್ಣು ಮಕ್ಕಳು ಹಾಗು ಗಂಡು ಮಕ್ಕಳಿಗೆ ಹಾಸ್ಟೆಲ್‌ಗಳನ್ನು ಕಟ್ಟಲಾಗಿದೆ. ಚೆನ್ನಾಗಿ ಓದಿ ಹೆಚ್ಚು ಅಂಕಗಳನ್ನು ಗಳಿಸುವುದು ನಿಮ್ಮ ಕೆಲಸ. ಕಾಲೇಜಿಗೆ ಬೇಕಾದ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದು ನನ್ನ ಜವಾಬ್ದಾರಿ. ಉಗ್ರರು ಪಹಲ್ಗಾಮ್‌ನಲ್ಲಿ ದಾಳಿ ನಡೆಸಿ 26 ಮಂದಿ ಅಮಾಯಕರನ್ನು ಬಲಿತೆಗೆದುಕೊಂಡಿರುವುದಕ್ಕೆ ಪ್ರತಿಯಾಗಿ ನಮ್ಮ ಯೋಧರು ಪಾಕಿಸ್ತಾನಕ್ಕೆ ನುಗ್ಗಿ ಉಗ್ರರ ಅಡಗು ತಾಣಗಳನ್ನು ನಾಶಪಡಿಸಿ ಎಚ್ಚರಿಕೆ ನೀಡಿದ್ದಾರೆ. ಬಲಿಷ್ಟ ರಾಷ್ಟ್ರ ಕಟ್ಟುವುದು ನಿಮ್ಮಗಳ ಕೈಯಲ್ಲಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ವಿಶ್ರಾಂತ ನ್ಯಾಯಾಧೀಶರಾದ ಹೆಚ್.ಬಿಲ್ಲಪ್ಪ ಮಾತನಾಡಿ ಪ್ರತಿಯೊಬ್ಬರು ಸುಂದರವಾದ ಜೀವನ ಕಟ್ಟಿಕೊಳ್ಳಲು ಸಂವಿಧಾನದಲ್ಲಿ ಅವಕಾಶವಿದೆ. ಜ್ಞಾನಕ್ಕಿಂತ ಮಿಗಿಲಾದುದು ಜೀವನದಲ್ಲಿ ಯಾವುದು ಇಲ್ಲ. ಜ್ಞಾನವೇ ಶಕ್ತಿ. ಸೌಖ್ಯವಾಗಿ ಸಮಾಜದಲ್ಲಿ ಜೀವಿಸಬೇಕಾದರೆ ಮೌಲ್ಯಯುತ ಶಿಕ್ಷಣ ಬೇಕು. ನಿಸ್ವಾರ್ಥವಾಗಿ ಜೀವಿಸಿ ಆಗ ಬದುಕು ಸುಂದರವಾಗಿರುತ್ತದೆ ಎಂದರು. ಪುರಸಭೆ ಅಧ್ಯಕ್ಷ ವಿಜಯಸಿಂಹ ಖಾಟ್ರೋತ್, ಉಪಾಧ್ಯಕ್ಷೆ ನಾಗರತ್ನವೇದಮೂರ್ತಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಡಾ.ಶಿವಮೂರ್ತಿನಾಯ್ಕಕಾಲೇಜು ಅಭಿವೃದ್ದಿ ಸಮಿತಿ ಸದಸ್ಯರಾದ ಆರ್.ಎ.ಅಶೋಕ್, ಮಲ್ಲಿಕಾರ್ಜುನಸ್ವಾಮಿ ಹಾಜರಿದ್ದರು.



**2.50 ಕೋಟಿ ರೂ.ವೆಚ್ಚದ ನೂತನ ಚೆಕ್‌ಡ್ಯಾಂ ಮತ್ತು ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ ಕಾಮಗಾರಿಗೆ ಶಾಸಕ ಡಾ.ಎಂ.ಚಂದ್ರಪ್ಪನವರಿಂದ ಭೂಮಿ ಪೂಜೆ.**

## ಟೆಲಿಮನಸ್ ಪೋಸ್ಟರ್ ಬಿಡುಗಡೆ



» **ದಾವಣಗೆರೆ**

ಟೆಲಿಮನಸ್ ಆರೋಗ್ಯ ಸಹಾಯವಾಣಿ 14416 ಗೆ ಕರೆ ಮಾಡಿ ಸದುಪಯೋಗ ಪಡಿಸಿಕೊಳ್ಳಿ ಎಂದು ಸೈಕಿಯಾಟ್ರಿಕ್ ಸೋಷಿಯಲ್ ವರ್ಕರ್ ಸಂತೋಷ್ ಕುಮಾರ್ ಎಂ ಹೇಳಿದರು. ಮಂಗಳವಾರ(ಜೂನ್.10) ರಂದು ಹೊನ್ನಾಳಿ ತಾಲ್ಲೂಕು ಆಸ್ಪತ್ರೆಯಲ್ಲಿ ಜಿಲ್ಲಾ ಆರೋಗ್ಯ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ವತಿಯಿಂದ ನಡೆದ ಮಾನಸಿಕ ಆರೋಗ್ಯ ಶಿಬಿರದಲ್ಲಿ ರಾಷ್ಟ್ರೀಯ ಟೆಲಿ ಮಾನಸಿಕ ಅರೋಗ್ಯ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರ ಜನ ಸಾಮಾನ್ಯರಿಗೆ 24 ಗಂಟೆಯು ಆಪ್ತ ಸಮಾಲೋಚನೆ ಲಭ್ಯವಾಗಬೇಕು ಎನ್ನುವ ನಿಟ್ಟಿನಲ್ಲಿ ಟೆಲಿ ಮನಸ್ 14416 ಎನ್ನುವ ಟೋಲ್ ಫ್ರೀ ಸಂಖ್ಯೆಯ ಸಹಾಯವಾಣಿ ಯನ್ನು ಬಿಡುಗಡೆ ಮಾಡಿದ್ದಾರೆ. ಪ್ರಸ್ತುತ ದಿನಮಾನದಲ್ಲಿ ಒತ್ತಡದ ಜೀವನ ನಡೆಸುತ್ತಿರುವ ಜನಸಾಮಾನ್ಯರಿಗೆ, ಮತ್ತು ಕೌಟುಂಬಿಕ ಸಮಸ್ಯೆ, ಮದ್ಯಪಾನ ಬಳಕೆ, ಪರೀಕ್ಷಾಭಯ, ಚಿಂತೆ, ವ್ಯಥೆ, ಬೇಜಾರು, ಆತ್ಮಹತ್ಯೆ ಯೋಚನೆ, ಸಂಬಂಧಗಳ ಸಮಸ್ಯೆ, ಆರ್ಥಿಕ ಒತ್ತಡ, ಇತರ ಯಾವುದೇ ಮಾನಸಿಕ ಆರೋಗ್ಯ ಸಮಸ್ಯೆಗಳಿದ್ದರೂ ಕೂಡ ಕರೆ ಮಾಡಿದರೆ ಎಲ್ಲರಿಗೂ ಫೋನ್ ಕರೆಯಿಂದ ಆಪ್ತ ಸಮಾಲೋಚನೆಯ ಪ್ರಾಥಮಿಕ ಚಿಕಿತ್ಸೆ ಪಡೆದುಕೊಳ್ಳಬಹುದು. ಈ ಕಾರ್ಯಕ್ರಮದ ಪ್ರಯೋಜನವನ್ನು ಪ್ರತಿಯೊಬ್ಬ ಜನಸಾಮಾನ್ಯರು, ಕಾರ್ಯಕ್ಷೇತ್ರದಲ್ಲಿರುವ ಸಿಬ್ಬಂದಿಗಳು ಕೂಡ ಈ ಪ್ರಯೋಜನ ಪಡೆದುಕೊಳ್ಳಲು ಕರೆ ನೀಡಿದರು. ಮನೋವೈದ್ಯರಾದ ಡಾ. ವೈಶಾಲಿ ಮತ್ತು ಸೈಕಿಯಾಟ್ರಿಕ್ ನರ್ಸಿಂಗ್ ಅಧಿಕಾರಿ ನಾಗರಾಜ್ ಎಸ್, ಎ. ಪಿ. ಡಿ. ಸಂಸ್ಥೆಯ ಭರಮಗೌಡ ಹಾಗೂ ಆಸ್ಪತ್ರೆ ಅರೋಗ್ಯ ಸಿಬ್ಬಂದಿ ಪ್ರೀತಿ ಹಾಜರಿದ್ದರು.

## ಅರ್ಜಿ ಆಹ್ವಾನ

**ದಾವಣಗೆರೆ:** ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿಗೆ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ವೆಬ್‌ಸೈಟ್ http://sevasindhu.karnataka.gov.in ಮುಖಾಂತರ ಗ್ರಾಮಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಜುಲೈ 2 ರೊಳಗಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ದೂ.ಸಂ: 080-22374848, 7899899039 ಸಂಪರ್ಕಿಸಿ.

## ಪ್ರಮುಖ ಸುದ್ದಿ

# ಕನ್ನಡದ ಕೆಲಸ ಹಾಗಬೇಕೆ ಹೊರತು ರಾಜಕೀಯ ಪ್ರೇರಿತ ಕೆಲಸ ಅಲ್ಲ

» **ಹೊಸದುರ್ಗ**

110 ವರ್ಷಗಳ ಇತಿಹಾಸ ಹೊಂದಿರುವ ಕನ್ನಡ ಸಾಹಿತ್ಯ ಪರಿಷತ್ತು ಯಾರೋಬ್ಬ ವ್ಯಕ್ತಿಯ ಹಿತಾಸಕ್ತಿಗೆ ಒಳಪಟ್ಟಿರುವುದಲ್ಲ, ಇದೊಂದು ಸೇವಾ ಕೇಂದ್ರ ಇಲ್ಲಿ ಕನ್ನಡದ ಕೆಲಸಗಳು ಹಾಗಬೇಕೆ ಹೋರತು ರಾಜಕೀಯ ಪ್ರೇರಿತ ಕೆಲಸಗಳು ಹಾಗಬಾರದು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಚಿತ್ರದುರ್ಗ ಜಿಲ್ಲಾಧ್ಯಕ್ಷ ಶಿವಸ್ವಾಮಿ ಕರೆ ನೀಡಿದರು.

ಪಟ್ಟಣದ ತಾಲೂಕು ಕ.ಸಾ.ಪ ಭವನದಲ್ಲಿ ಸೋಮವಾರ ಸಂಜೆ ಆಯೋಜಿಸಲಾಗಿದ್ದ ನೂತನ ಅಧ್ಯಕ್ಷರಿಗೆ ಅಧಿಕಾರ ಹಸ್ತಾಂತರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.




ಕನ್ನಡ ಎಂಬ ವಿಷಯ ಬಂದಾಗ ಎಲ್ಲರೂ ಸಹಾ ಒಟ್ಟಾಗಿ ಸೇರಿ ಕನ್ನಡದ ಕೆಲಸ ಮಾಡುವುದರ ಜೋತೆಗೆ ಕನ್ನಡಾಂಬೆಯ ತೇರು ಎಳೆಯಬೇಕಿದೆ ಕನ್ನಡದ ರಥವನ್ನ ಸಮರ್ಥವಾಗಿ ಎಳೆದುಕೊಂಡು ಹೋಗುವ ಕೆಲಸವಾಗಬೇಕಾಗಿದೆಎಲ್ಲಾ ಕ್ಷೇತ್ರಗಳಲ್ಲೂ ಸಹಾ ಟೀಕೆಗಳು ಬರುವುದು ಸಹಜ ಟೀಕೆಗಳಿಗೆ ಜಗ್ಗದೆ ಬಗ್ಗದೆ ಅವುಗಳನ್ನು ನಿಭಾಯಿಸಿಕೊಂಡು ಕನ್ನಡದ ಕೆಲಸ ಮಾಡುವ ಕಟ್ಟಾಳುಗಳಾಗಬೇಕು,ನಾವು ನಮ್ಮ ಜವಾಬ್ದಾರಿಗಳನ್ನ ನಿಭಾಯಿಸಬೇಕಾಗಿದೆ ಎಂದರು. ಕನ್ನಡ ಕೆಲಸ ಕಾರ್ಯ ಕಲಾಪಗಳನ್ನು ಮಾಡುವಾಗಿ ಸರ್ವರನ್ನು ಸಮಾನವಾಗಿ ಕಾಣಬೇಕಾಗಿದೆ, ಸಂಘ ಸಂಸ್ಥೆಗಳ ಸಹಕಾರ ನೆರವನ್ನ ಪಡೆಯಬೇಕಾಗುತ್ತದೆ,ಹಿಂದಿನ ಅಧ್ಯಕ್ಷರಾಗಿದ್ದ ಕೆ.ಎಸ್.ಕಲ್ಮಠ್, ಎಂ.ಬಿ.ತಿಪ್ಪೇಸ್ವಾಮಿ, ಮಾಜಿ ಕಾರ್ಯದರ್ಶಿ ನಾಗತಿಹಳ್ಳಿಮಂಜುನಾಥ್ ಇವರುಗಳ ಅವಧಿಯಲ್ಲಿ ಕ.ಸಾ.ಪ ಕ್ಕೆ ನಿವೇಶನ ಮಾಡಿದ್ದರು ನಂತರದಲ್ಲಿ ಅಧ್ಯಕ್ಷರಾದ ಧನಂಜಯಮೆಂಗಸಂದ್ರ ಕಟ್ಟಡ ನಿರ್ಮಾಣ ಮಾಡಿ ಲೋಕಾರ್ಪಣೆ ಮಾಡಿದರು. ಇದೀಗ ಪ್ರಸ್ತುತ ಅಧ್ಯಕ್ಷರಾಗಿರುವ ಎಂ.ಆರ್. ಶಾಂತಪ್ಪನವರು ಅದೇ ರೀತಿ ಮುಂದುವರೆಸಿಕೊಂಡು ಕಾಂಪೌಂಡ್ ಮತ್ತು ಮಳಿಗೆಗಳನ್ನು ನಿರ್ಮಾಣ ಮಾಡಲಿ ನಿರ್ಮಾಣಗೊಂಡ ಮಳಿಗೆಗಳಿಂದ ಬಂದ ಹಣ ಕನ್ನಡದ ಕೆಲಸಗಳಿಗೆ ಸದ್ವಿನಿಯೋಗವಾಗಲಿ ಎಂದು ಅಭಿಪ್ರಾಯಿಸಿದರು.ನೂತನ ಅಧ್ಯಕ್ಷ ಎಂ.ಆರ್.ಶಾಂತಪ್ಪ ಮಾತನಾಡಿ ನನ್ನ ಅವಧಿ ಇರುವವರೆಗೂ ಸಹಾ ಎಲ್ಲರನ್ನೂ ಸಹಾ ಸಮಾನ ಮನಸ್ಥಿತಿಯಿಂದ ನೀಡಿಕೊಂಡು ಹೋಗುತ್ತೇನೆ, ಕ.ಸಾ.ಪ ಕ್ಕೆ ಆಗಬೇಕಾಗಿರುವ ಅಭಿವೃದ್ಧಿ ಕೆಲಸಗಳ ಬಗ್ಗೆ ಸರ್ವರ ಸಹಕಾರದಿಂದ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂಬ ಭರವಸೆ ನೀಡಿದರು.ನಿಕಟ ಪೂರ್ವ ಅಧ್ಯಕ್ಷ ಬಿ.ಪಿ.ಓಂಕಾರಪ್ಪ ಅವರು ನೂತನ ಅಧ್ಯಕ್ಷ ಎಂ.ಆರ್.ಶಾಂತಪ್ಪ ಅವರಿಗೆ ಕನ್ನಡ ಭಾವುಟ ನೀಡುವುದರ ಮೂಲಕ ಅಧಿಕಾ ಹಸ್ತಾಂತರ ಮಾಡಿದರು. ಈ ಸಂಧರ್ಬದಲ್ಲಿ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಸೇರಿದಂತೆ ಮಾಜಿ ಅಧ್ಯಕ್ಷರುಗಳು, ಕಾರ್ಯದರ್ಶಿಗಳು,ಪದಾಧಿಕಾರಿಗಳು ಸಾಹಿತಿಗಳು, ಕನ್ನಡಾಭಿಮಾನಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T